# ನಮ್ಮ ಜನ
# NAMMA JANA

ಸಮಸ್ತ ಓದುಗರಿಗೆ, ಜಾಹಿರಾತುದಾರರಿಗೆ ಮತ್ತು ಜನತೆಗೆ 77ನೇ ಸ್ವಾತಂತ್ರ್ಯೋತ್ಸವದ ಶುಭಾಶಯಗಳು
» ಸಂಪಾದಕ

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 39 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 15-08-2023 ಮಂಗಳವಾರ | ಪುಟ: 4 | ಬೆಲೆ : ರೂ.2-00
Volume - 01 Issue - 39 | Title- Code: KARKAN 28269 | Chitradurga | Date: 15-08-2023 Tuesday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಮೃತ ಕುಟುಂಬಗಳಿಗೆ ಆಹಾರ ಧಾನ್ಯ ವಿತರಣೆ ಜೊತೆಗೆ ಹಣದ ನೆರವು 2

ಹಿಮಾಚಲ ಪ್ರದೇಶದಲ್ಲಿ ವರುಣನ ಆರ್ಭಟಕ್ಕೆ ಭೂ ಕುಸಿತ 21ಜನ ಸಾವು 3

ಭ್ರಷ್ಟರ ದಾಸ್ಯದ ಕಠಿನರಲು ನಮ್ಮನ್ನು ಆವರಿಸಿದೆ: ರಘು 4


## ಫಾಸ್ಟ್ ನ್ಯೂಸ್

### ಟೊಮೆಟೊ ಕುಸಿತ, ಸದ್ದಿಲ್ಲದೆ ಏರುತ್ತಿದೆ ಈರುಳ್ಳಿ ಬೆಲೆ

ಮಳೆ ಕಡಿಮೆಯಾದ ಹಿನ್ನೆಲೆ ಟೊಮೆಟೊ ಬೆಲೆ ಇಳಿಕೆಯಾಗಿದೆ. ಬೆಲೆ ಇಳಿಕೆಯಾಗುತ್ತಿದ್ದಂತೆ ಗ್ರಾಹಕರು ಫುಲ್ ಖುಷ್ ಆಗಿದ್ದಾರೆ. ಆದ್ರೆ ಮತ್ತೊಂದು ಕಡೆ ಸದ್ದಿಲ್ಲದೆ ಈರುಳ್ಳಿ ಬೆಲೆ ಏರಿಕೆಯಾಗುತ್ತಿದೆ. ಕಳೆದ ಒಂದು ವಾರದಿಂದ ಈರುಳ್ಳಿ ಬೆಲೆಯಲ್ಲಿ ಕೆಜಿಗೆ ಸುಮಾರು 12–15 ರೂ ರಷ್ಟು ಏರಿಕೆ ಕಂಡು ಬಂದಿದೆ. ಮುಂಗಾರು ಮಳೆ ಕೈಕೊಟ್ಟು ಚಿತ್ರದುರ್ಗ, ದಾವಣಗೆರೆ ಹಾಗೂ ಕರ್ನಾಟಕದ ಇತರೆಡೆಯಿಂದ ಈರುಳ್ಳಿ ಲಭ್ಯವಾಗುತ್ತಿಲ್ಲ. ಹೀಗಾಗಿ ರಾಜ್ಯದಲ್ಲಿ ಸುಮಾರು 4,000 ಹೆಕ್ಟೇರ್‌ನಲ್ಲಿ ಬೆಳೆ ಕೊರತೆ ಇದೆ.

### ದಕ್ಷಿಣ ಭಾರತದಲ್ಲಿ ಬಿಜೆಪಿಯ ಬಾಗಿಲು ಮುಚ್ಚಿದೆ :ಡಿಕೆ ಶಿವಕುಮಾರ್

ದಕ್ಷಿಣ ಭಾರತದಲ್ಲಿ ಬಿಜೆಪಿಯ ಬಾಗಿಲು ಮುಚ್ಚಿದೆ ಎಂದು ಕಾಂಗ್ರೆಸ್ ಸರ್ವ ಸದಸ್ಯರ ಸಭೆಯಲ್ಲಿ ಡಿ.ಕೆ.ಶಿವಕುಮಾರ್ ಹೇಳಿದರು. ಕೆಪಿಸಿಸಿ ನೂತನ ಕಟ್ಟಡದಲ್ಲಿ ನಡೆಯುತ್ತಿರುವ ಸರ್ವ ಸದಸ್ಯರ ಸಭೆಯಲ್ಲಿ ಮಾತನಾಡಿದ ಡಿಕೆಶಿ, ಯೋಗ ಬರುತ್ತದೆ, ಯೋಗಕ್ಕಿಂತ ಯೋಗಕ್ಷೇಮ ಬಹಳ ಮುಖ್ಯ. ಬಂದಿರುವ ಯೋಗವನ್ನು ಕಾಪಾಡಿಕೊಂಡು ಹೋಗಬೇಕು. ಟೀಂ ಎಫರ್ಟ್‌ನಿಂದ ವಿಧಾನಸಭೆ ಚುನಾವಣೆಯಲ್ಲಿ ಗೆದ್ದಿದ್ದೇವೆ. 224ರ ಪೈಕಿ 218 ಅಭ್ಯರ್ಥಿಗಳಿಗೆ ಒಮ್ಮತದ ಟಿಕೆಟ್ ನೀಡಿದ್ದೆವು. ಕಾಂಗ್ರೆಸ್ ಅಧಿಕಾರಕ್ಕೆ ತರಬೇಕು ಎಂಬುದಷ್ಟೇ ನಮ್ಮ ಗುರಿಯಾಗಿತ್ತು. ವೈಯಕ್ತಿಕ ಭಿನ್ನಾಭಿಪ್ರಾಯವಿದ್ದರೂ ಕೂಡ ನಾವು ಕೆಲಸ ಮಾಡಿದ್ದೇವೆ. ಹಳೆ ಪದ್ಧತಿಯಲ್ಲೇ ಪಕ್ಷ ನಡೆಯುತ್ತೆ ಅಂತಾ ಕೆಲವರು ಭಾವಿಸಿದ್ದರು. ನನ್ನ ಆಲೋಚನೆ ಇನ್ನೂ ಡೀಪ್ ಆಗಿತ್ತು ಎಂದರು.

### ಸ್ವಾತಂತ್ರ್ಯೋತ್ಸವಕ್ಕೆ ಶಾಸಕ ಇಕ್ಬಾಲ್ ಹುಸೇನ್‌ನಿಂದ 2.70 ಲಕ್ಷ ಲಡ್ಡು ವಿತರಣೆ

ರಾಮನಗರ ಶಾಸಕ ಇಕ್ಬಾಲ್ ಹುಸೇನ್ ಅವರು 76ನೇ ಸ್ವಾತಂತ್ರ್ಯೋತ್ಸವ ಸಂಭ್ರಮಕ್ಕೆ 2.70 ಲಕ್ಷ ಲಡ್ಡು ವಿತರಿಸಲು ಮುಂದಾಗಿದ್ದಾರೆ. ಜಿಲ್ಲೆಯ 5 ತಾಲೂಕಿನ ಶಾಲಾ–ಕಾಲೇಜು, ಸರ್ಕಾರಿ ಕಚೇರಿಗಳಿಗೆ ಲಾಡು ಹಂಚಲು ಒರೋಬ್ಬರಿ 2 ಲಕ್ಷದ 70 ಸಾವಿರ ಲಾಡು ತಯಾರಿಸಲು ಆರ್ಡರ್ ಕೊಡಲಾಗಿದೆ.

## ಶುದ್ಧ ಕುಡಿಯುವ ನೀರು, ವೈಯಕ್ತಿಕ ಸ್ವಚ್ಛತೆ ಕಾಪಾಡಿಕೊಳ್ಳಿ

# ಬೃಹತ್ ಜನ ಜಾಗೃತಿ ಸಪ್ತಾಹ







» ಚಿತ್ರದುರ್ಗ

ಜಿಲ್ಲೆಯ ಜನರಲ್ಲಿ ಶುದ್ಧ ಕುಡಿಯುವ ನೀರು ಮತ್ತು ವೈಯಕ್ತಿಕ ಸ್ವಚ್ಛತೆ ಹಾಗೂ ಪರಿಸರ ನೈರ್ಮಲ್ಯ ಪಾಲನೆ ಕುರಿತು ಆ.14 ರಿಂದ ಒಂದು ವಾರಗಳ ಕಾಲ ಜಿಲ್ಲೆಯಾದ್ಯಂತ ಹಮ್ಮಿಕೊಳ್ಳಲಾಗಿರುವ ಬೃಹತ್ ಜನ ಜಾಗೃತಿ ಸಪ್ತಾಹ ಕಾರ್ಯಕ್ರಮಕ್ಕೆ ನಗರದ ಒನಕೆ ಓಬವ್ವ ವೃತ್ತದಲ್ಲಿ ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಹಾಗೂ ಜಿಲ್ಲಾಧಿಕಾರಿ ದಿವ್ಯಪ್ರಭು ಅವರು ಚಾಲನೆ ನೀಡಿದರು.

ಬೆಳಗ್ಗೆ 9 ಗಂಟೆಯಿಂದಲೇ ನಗರದ ವಿವಿಧ ಭಾಗಗಳಿಂದ ಸಾಲು ಸಾಲಾಗಿ ಆಗಮಿಸಿದ ವಿದ್ಯಾರ್ಥಿಗಳು ಓನಕೆ ಓಬ್ಬವ್ವ ವೃತ್ತದಲ್ಲಿ ಸಂಗಮಿಸಿದರು. ವೀರಗಾಸೆ, ಪಟ ಕುಣಿತ, ಬೊಂಬೆ ಕುಣಿತ, ಹಲಗೆ ವಾದನ ಮುಂತಾದ ಕಲಾ ತಂಡಗಳು ಜಾಥಾ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮೆರಗು ಹೆಚ್ಚಿಸಿದವು. ಪೂರ್ಣಕುಂಭ ಹೊತ್ತ ಮಹಿಳೆಯರು ಓಬವ್ವ ವೃತ್ತದಲ್ಲಿ ಮುಂಚೂಣಿಯಲ್ಲಿದ್ದು, ಜಾಥಾಕ್ಕೆ ಯಶಸ್ಸು ಕೋರಲು ಶುಭ ಕೋರುವಂತೆ ಬೆಳ್ಳಂ ಬೆಳಿಗ್ಗೆ ದುರ್ಗದಲ್ಲಿ ಹಬ್ಬದ ವಾತಾವರಣ ಸೃಷ್ಟಿಯಾಗಿತ್ತು.

ಬೃಹತ್ ಜನ ಜಾಗೃತಿ ಜಾಥಾಕ್ಕೆ ಹಸಿರು ನಿಶಾನೆತೋರುವಮೂಲಕಚಾಲನೆನೀಡಿದ ಮಾತನಾಡಿದ ಸಚಿವ ಡಿ.ಸುಧಾಕರ್, ಪರಿಸರ ನೈರ್ಮಲ್ಯ, ಶುದ್ಧ ಕುಡಿಯುವ ನೀರು ಹಾಗೂ ಸ್ವಚ್ಛತೆ ಕಾಪಾಡಿಕೊಳ್ಳುವ ಕುರಿತು ಹಮ್ಮಿಕೊಂಡಿರುವ ಬೃಹತ್ ಜನ ಜಾಗೃತಿ ಜಾಥಾ ಜಿಲ್ಲೆಯ ಮಟ್ಟಿಗೆ ಇದೊಂದು ವಿಶೇಷ ಕಾರ್ಯಕ್ರಮವಾಗಿದೆ. ಕೆಲವು ದಿನಗಳ ಹಿಂದೆ ಜಿಲ್ಲೆಯಲ್ಲಿ ನಡೆದ ಕವಾಡಿಗರಹಟ್ಟಿಯಲ್ಲಿ ಸಂಭವಿಸಿದ ಅಹಿತಕರ ಘಟನೆ ಇಡೀ ರಾಜ್ಯದಲ್ಲಿಯೇ ಗಂಭೀರವಾದ ಪ್ರಕರಣವಾಗಿದೆ. ಕವಾಡಿಗರಹಟ್ಟಿಯಂತಹ ಪ್ರಕರಣ ಜಿಲ್ಲೆಯಲ್ಲಿ ಎಲ್ಲಿಯೂ ಮರಕಳಿಸಬಾರದು. ಜಿಲ್ಲೆಯ ಎಲ್ಲ ವರ್ಗದ ಜನರು ಆರೋಗ್ಯದಿಂದ ಇರಬೇಕು. ಪ್ರತಿಯೊಬ್ಬರು ಶುದ್ಧ ಕುಡಿಯುವ ನೀರು ಸೇವಿಸಬೇಕು. ತಮ್ಮ ಸುತ್ತಮುತ್ತಲಿನ ಪರಿಸರವನ್ನೂ ಸ್ವಚ್ಛತೆಯಿಂದ ಕಾಪಾಡಿಕೊಳ್ಳಬೇಕು ಎಂದು ಮನವಿ ಮಾಡಿದರು.




ಬೃಹತ್ ಜನ ಜಾಗೃತಿ ಜಾಥಾಕ್ಕೆ ಜಿಲ್ಲೆಯ ಜನಪ್ರತಿನಿಧಿಗಳು, ಸ್ಥಳೀಯ ಮುಖಂಡರು, ಸಂಘ–ಸಂಸ್ಥೆಗಳು ಕೈಜೋಡಿಸಬೇಕು. ಜನರ ಆರೋಗ್ಯ ಕಾಪಾಡುವುದು ಸರ್ಕಾರದ ಜವಾಬ್ದಾರಿಯಾಗಿದೆ. ಈ ನಿಟ್ಟಿನಲ್ಲಿ ಜಿಲ್ಲೆಯಲ್ಲಿರುವ ಎಲ್ಲ ಜಲ ಸಂಗ್ರಹಾರಗಳನ್ನು ಸ್ವಚ್ಛಗೊಳಿಸುವ ಪ್ರಕ್ರಿಯೆ ಈಗಾಗಲೇ ಪ್ರಾರಂಭವಾಗಿದೆ. ಇದಕ್ಕಾಗಿ ಸಾರ್ವಜನಿಕರು ಅಗತ್ಯ ಸಹಕಾರ ನೀಡಬೇಕು ಎಂದು ಹೇಳಿದರು.

ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಮಾತನಾಡಿ ಕುಡಿಯುವ ನೀರು ಹಾಗೂ ಸ್ವಚ್ಛತೆಯ ಬಗ್ಗೆ ಜಿಲ್ಲೆಯ ಜನರಿಗೆ ಅರಿವು ಮೂಡಿಸುವ ನಿಟ್ಟಿನಲ್ಲಿ ಬೃಹತ್ ಜಾಗೃತಿ ಜಾಥಾ ಹಮ್ಮಿಕೊಳ್ಳಲಾಗಿದೆ. ವಾರದ ಹಿಂದೆ ನಗರದ ಕವಾಡಿಗರಹಟ್ಟಿಯ ಕಲುಷಿತ ನೀರು ಸೇವನೆಯ ಘಟನೆಯಿಂದ ಐದು ಜನರು ಮರಣ ಹೊಂದಿದ್ದು, ಹಲವು ಜನರು ಅಸ್ವಸ್ಥರಾಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದು ಗುಣಮುಖರಾಗಿದ್ದಾರೆ. ಜನ ಜಾಗೃತಿ ಜಾಥದಲ್ಲಿ ಪ್ರತಿದಿನವೂ ವಿನೂತನ ಕಾರ್ಯಕ್ರಮಗಳ ಮೂಲಕ ಜನಜಾಗೃತಿ ಮೂಡಿಸಲಾಗುವುದು ಎಂದು ತಿಳಿಸಿದರು. ಜಾಥಾದಲ್ಲಿ ಶಾಲಾ–ಕಾಲೇಜು ವಿದ್ಯಾರ್ಥಿಗಳು, ನರ್ಸಿಂಗ್ ವಿದ್ಯಾರ್ಥಿಗಳು, ಆಶಾ ಕಾರ್ಯಕರ್ತೆಯರು, ಅಂಗನವಾಡಿ ಕಾರ್ಯಕರ್ತೆಯರು, ಆರೋಗ್ಯ ಇಲಾಖೆ, ನಗರಸಭೆ ಸಿಬ್ಬಂದಿ ಅವರು ಚಿತ್ರದುರ್ಗ ನಗರದ 35 ವಾ□□□□ಗಳಿಗೂ ತೆರಳಿ ಜನರಿಗೆ ವಿವಿಧ ಬಗೆಯ ಕಲಾ ತಂಡಗಳಿಂದ ಬೀದಿ ನಾಟಕ ಪ್ರದರ್ಶನ, ಜಾಗೃತಿ ಸಂದೇಶಗಳ ಭಿತ್ತಿಪತ್ರಗಳ ಪ್ರದರ್ಶನ, ಜಾಗೃತಿ ಘೋಷಣೆಗಳು, ಎ□□ಇಡಿ ವಾಹನದಲ್ಲಿ ವಿಡಿಯೋ ಚಿತ್ರ ಪ್ರದರ್ಶನದ ಮೂಲಕ ಜಾಗೃತಿ ಮೂಡಿಸಲಾಗುವುದು. ಇದು ಕೇವಲ ಚಿತ್ರದುರ್ಗ ನಗರಕ್ಕೆ ಮಾತ್ರ ಸೀಮಿತವಲ್ಲ. ಜಿಲ್ಲೆಯ ಗ್ರಾಮೀಣ ಪ್ರದೇಶಗಳಲ್ಲಿಯೂ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಜಾಗೃತಿ ಜಾಥಾದ ಮೂಲಕ ಅರಿವು ಮೂಡಿಸಲಾಗುವುದು. ಕರಪತ್ರಗಳ ಹಂಚಿಕೆ, ಕಸ ವಿಲೇವಾರಿ ವಾಹನಗಳಲ್ಲಿ ಧನಿವರ್ಧಕಗಳ ಮೂಲಕ ಜಾಗೃತಿ ಸಂದೇಶಗಳು, ಗ್ರಾಮ ಪಂಚಾಯತಿಗಳಲ್ಲಿ ವಿಶೇಷ ಗ್ರಾಮ ಸಭೆಗಳನ್ನು ಆಯೋಜಿಸಿ, ಗ್ರಾಮಸ್ಥರಲ್ಲಿ ನೀರು ಹಾಗೂ ನೈರ್ಮಲ್ಯದ ಮಹತ್ವ ಕುರಿತು ಮನವರಿಕೆ ಮಾಡಿಕೊಡುವುದು, ಸ್ತ್ರೀಶಕ್ತಿ ಮತ್ತು ಮಹಿಳಾ ಸ್ವ ಸಹಾಯ ಗುಂಪುಗಳ ಮೂಲಕ ಮಹಿಳೆಯರಲ್ಲಿ ಜಾಗೃತಿ ಮೂಡಿಸುವುದು, ವೈಯಕ್ತಿಕ ಸ್ವಚ್ಛತೆ ಕುರಿತು ಜಿಲ್ಲೆಯಾದ್ಯಂತ ಆರೋಗ್ಯ ಇಲಾಖೆಯಿಂದ ಪ್ರಾತ್ಯಕ್ಷಿಕೆಗಳ ಆಯೋಜನೆ,ಶಾಲೆಗಳಲ್ಲಿಬೆಳಗಿನಪ್ರಾರ್ಥನೆ ಸಂದರ್ಭದಲ್ಲಿ ಮಕ್ಕಳಲ್ಲಿ ಕುಡಿಯುವ ನೀರು ಮತ್ತು ಸ್ವಚ್ಛತೆ ಕಾಪಾಡಿಕೊಳ್ಳುವ ಬಗ್ಗೆ ತಿಳುವಳಿಕೆ ನೀಡುವುದು, ಜಿಲ್ಲೆಯಾದ್ಯಂತ ಸಂಜೆಯ ವೇಳೆ ಪಂಜಿನ ಮೆರವಣಿಗೆ ಏರ್ಪಡಿಸಿ ಜನರ ಗಮನ ಸೆಳೆದು ಧ್ವನಿವರ್ಧಕ ಮೂಲಕ ಅವರಿಗೆ ಜಾಗೃತಿಯ ಸಂದೇಶ ನೀಡುವುದು ಹೀಗೆ ಇನ್ನೂ ಹತ್ತು ಹಲವು ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದು ಎಂದರು.

ಮೊಳಕಾಲ್ಮೂರಿನ ಜಾನಪದ ಕಲಾ ತಂಡದ ಗಾಯಕರು ಸ್ವಚ್ಛತೆ ಕುರಿತು ಗಾಯನ ಪ್ರಸ್ತುತ ಪಡಿಸಿದರು. ಶಾಲಾ–ಕಾಲೇಜು ವಿದ್ಯಾರ್ಥಿಗಳು ವೀರಗಾಸೆ ಹಾಗೂ ಸಂಗೀತಕ್ಕೆ ಹೆಜ್ಜೆ ಹಾಕಿ ಸಂಭ್ರಮಿಸಿದರು. ಸಮವಸ್ತ್ರ ಧರಿಸಿ, ಕೈಯಲ್ಲಿ ಜಾಗೃತಿ ಫಲಕಗಳನ್ನು ಹಿಡಿದ ವಿದ್ಯಾರ್ಥಿಗಳು, ಕಾಯಿಸಿ ಆರಿಸಿದ ನೀರನ್ನು ಕುಡಿಯುವುದು, ಕೈಗಳ ಸ್ವಚ್ಛತೆ, ಬಯಲು ಮುಕ್ತ ಶೌಚದ ಕುರಿತು ಘೋಷಣೆಗಳನ್ನು ಸಾರುತ್ತಾ, ಮದಕರಿ ನಾಯಕ ವೃತ್ತ, ಅಂಬೇಡ್ಕರ್ ವೃತ್ತ, ತಹಶೀಲ್ದಾರ್ ಕಚೇರಿ, ಕೆಳಗೋಟೆ ಸೇರಿದಂತೆ ವಿವಿಧ ವಾರ್ಡ್ ಹಾಗೂ ಬಡಾವಣೆಗಳಿಗೆ ಪ್ರಭಾತ್ ಫೇರಿ ನಡೆಸುತ್ತಾ ಸಾಗಿದರು.

ಇದೇ ಸಂದರ್ಭದಲ್ಲಿ ನಗರದ ಪ್ರತಿ ವಾರ್ಡಗಳಲ್ಲಿ ಆಟೋ ಮೂಲಕ ಹಾಗೂ ವಿಡಿಯೋ ವಾಹನದಲ್ಲಿ ಜಾಗೃತಿ ಸಂದೇಶದ ದೃಶ್ಯಗಳೊಂದಿಗೆ ಪ್ರಚಾರ ನಡೆಸಲಾಯಿತು. ಓಬವ್ವ ವೃತ್ತದಲ್ಲಿ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಮೂಗಪ್ಪ ಅವರು, ಡಿಹೆ□□ಒ ಡಾ. ರಂಗನಾಥ್ ಅವರ ಮಾರ್ಗದರ್ಶನದಲ್ಲಿ ಸ್ವಚ್ಛವಾಗಿ ಕೈ ತೊಳೆಯುವ ಕ್ರಮ ಕುರಿತು ಪ್ರಾತ್ಯಕ್ಷಿಕೆ ಮೂಲಕ ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರಿಗೆ ಇದೇ ಸಂದರ್ಭದಲ್ಲಿ ಮನವರಿಕೆ ಮಾಡಿಕೊಟ್ಟರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸೋಮಶೇಖರ್, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ಪರಶುರಾಮ್, ಉಪವಿಭಾಗಾಧಿಕಾರಿ ಎಂ.ಕಾರ್ತಿಕ್, ಡಿಹೆ□□□ ಡಾ.ಆರ್.ರಂಗನಾಥ್, ತಹಶೀಲ್ದಾರ್ ನಾಗವೇಣಿ, ಡಿಡಿಪಿಐ ಕೆ.ರವಿಶಂಕರ್ ರೆಡ್ಡಿ, ಬಿಇಒ ನಾಗಭೂಷಣ್ ಸೇರಿ ಜಿಲ್ಲಾ ಮತ್ತು ತಾಲೂಕು ಮಟ್ಟದ ಅಧಿಕಾರಿಗಳು ಭಾಗವಹಿದ್ದರು.

## ಪ್ರಮುಖ ಸುದ್ದಿ

# ಸಾಣಿಕೆರೆ ಬೆಸ್ಕಾಂ ಕಚೇರಿ ಮುಂದೆ ಗ್ರಾಮಸ್ಥರ ಪ್ರತಿಭಟನೆ



» ಚಳ್ಳಕೆರೆ

ತಾಲ್ಲೂಕಿನ ಸಾಣಿಕೆರೆ ಬೆಸ್ಕಾಂ ಘಟಕದಿಂದ ಪ್ರತಿನಿತ್ಯ ವಿದ್ಯುತ್ ಸರಬರಾಜಿನಲ್ಲಿ ನಿರಂತರ ತೊಂದರೆಯಾಗುತ್ತಿದ್ದು, ಬೆಸ್ಕಾಂನ ನಿರ್ಲಕ್ಷ್ಯ ದೊರಣೆಯನ್ನು ಖಂಡಿಸಿ ಚಿಕ್ಕಮದುರೆ ಗ್ರಾಮದ ಗ್ರಾಮಸ್ಥರು ಸಾಣಿಕೆರೆ ಬೆಸ್ಕಾಂ ಕಚೇರಿ ಮುಖ್ಯದ್ವಾರದ ಗೇಟ್ ಬಳಿ ಪ್ರತಿಭಟನೆ ನಡೆಸಿದರು.

ಗ್ರಾಮದ ಏಕಾಂತರಪ್ಪ, ಪುನಿತ್ ಮುಂತಾದವರು ಈ ಬಗ್ಗೆ ಮಾತನಾಡಿ, ಪ್ರತಿನಿತ್ಯ ಬೆಳಗ್ಗೆಯಿಂದ ಸಂಜೆಯವರಿಗೂ ನಮ್ಮ ಗ್ರಾಮವೂ ಸೇರಿದಂತೆ ಸುತ್ತಮುತ್ತಲ ಗ್ರಾಮಗಳಲ್ಲಿ ಕಳೆದ ಹಲವಾರು ದಿನಗಳಿಂದ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗುತ್ತಿದೆ. ಇಲಾಖೆಯ ಕಾಮಗಾರಿ ಸಂದರ್ಭದಲ್ಲಿ ವಿದ್ಯುತ್ ಸರಬರಾಜನ್ನು ನಿಯಂತ್ರಿಸುವುದು ಸ್ವಾಭಾವಿಕ, ನಂತರವೂ ಸಹ ನಮ್ಮ ಗ್ರಾಮವ್ಯಾಪ್ತಿಯಲ್ಲಿ ಪ್ರತಿನಿತ್ಯವೂ ಬೆಳಗ್ಗೆನಿಂದ ಸಂಜೆಯವರೆಗೂ ಹಾಗಾಗ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ ಉಂಟಾಗುತ್ತಿದೆ. ಈ ಬಗ್ಗೆ ಬೆಸ್ಕಾಂ ಇಲಾಖೆಯ ಸಿಬ್ಬಂದಿಯನ್ನು ಕೇಳಿದರೆ ಅವರಿಂದ ಸೂಕ್ತ ಮಾಹಿತಿ ದೊರೆಯುತ್ತಿಲ್ಲ. ಇದರಿಂದ ರೋಸಿದ ನಾವು ಇಲಾಖೆಯ ಪ್ರವೇಶದ್ವಾರದಲ್ಲೇ ಮುಷ್ಕರ ನಡೆಸಿ ಅಧಿಕಾರಿಗಳಿಗೆ ಮನವಿ ನೀಡಿದ್ದೇವೆಂದರು.

ಸ್ಥಳಕ್ಕೆ ಆಗಮಿಸಿದ ಚಳ್ಳಕೆರೆ ಉಪವಿಭಾಗದ ಸಹಾಯಕ ಕಾರ್ಯಪಾಲಕ ಅಭಿಯಂತರ ರಾಜು, ಗ್ರಾಮಸ್ಥರಿಂದ ಮನವಿ ಸ್ವೀಕರಿಸಿ ಮಾತನಾಡಿ, ಇತ್ತೀಚಿನ ದಿನಗಳಲ್ಲಿ ವಿದ್ಯುತ್ ಸರಬರಾಜು ಹಾಗೂ ನಿಯಂತ್ರಣದ ಬಗ್ಗೆ ವಿಭಾಗ ಮತ್ತು ಜಿಲ್ಲಾ ಕೇಂದ್ರದಲ್ಲೇ ನಿಯಂತ್ರಣ ಮಾಡಲಾಗುತ್ತಿದೆ. ಸ್ಥಳೀಯವಾಗಿ ವಿದ್ಯುತ್ ನಿಯಂತ್ರಣಕ್ಕೆ ನಮಗೆ ಅವಕಾಶವಿಲ್ಲ. ಆದರೂ ಸಹ ಈ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳ ಗಮನಕ್ಕೆ ತಂದು ವ್ಯವಸ್ಥೆ ಸರಿಪಡಿಸುವ ಭರವಸೆ ನೀಡಿದರು.




## ಫಾಸ್ಟ್ ನ್ಯೂಸ್

### ರಾಜ ಭವನಕ್ಕೆ ಸಿದ್ದರಾಮಯ್ಯ ಭೇಟಿ

ಹೃದಯ ಸಂಬಂಧಿ ಸಮಸ್ಯೆ ಹಿನ್ನೆಲೆ ತಡರಾತ್ರಿ ಜಯದೇವ ಹೃದ್ರೋಗ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರ ಆರೋಗ್ಯ ವಿಚಾರಿಸಲು ಸಿಎಂ ಸಿದ್ದರಾಮಯ್ಯ ರಾಜ ಭವನಕ್ಕೆ ಭೇಟಿ ನೀಡಿ ಆರೋಗ್ಯ ವಿಚಾರಿಸಿದ್ದಾರೆ.

### ರಾಜ್ಯದಲ್ಲಿ ಭ್ರಷ್ಟ ಸರ್ಕಾರ ಇದೆ, ಈ ಸರ್ಕಾರ ಬಹಳ ದಿನ ಇರಲ್ಲ: ಆರ್.ಅಶೋಕ್

ರಾಜ್ಯದಲ್ಲಿ ಭ್ರಷ್ಟ ಸರ್ಕಾರ ಇದೆ, ಈ ಸರ್ಕಾರ ಬಹಳ ದಿನ ಇರಲ್ಲ ಎಂದು ಬೆಂಗಳೂರಿನಲ್ಲಿ ಮಾಜಿ ಸಚಿವ ಆರ್.ಅಶೋಕ್ ಹೇಳಿಕೆ ನೀಡಿದ್ದಾರೆ. ಕಮಿಷನ್ ಸರ್ಕಾರ, ಎಟಿಎಂ ಸರ್ಕಾರದ ವಿರುದ್ಧ ಮಂಡ್ಯದಲ್ಲಿ ಈಗಾಗಲೇ ಬಿಜೆಪಿ ಹೋರಾಟ ಆರಂಭವಾಗಿದೆ. ಭ್ರಷ್ಟ ಸರ್ಕಾರದ ವಿರುದ್ಧ ಹೋರಾಟ ಮಾಡಲು ನಿರ್ಧರಿಸಿದ್ದೇವೆ ಎಂದರು.

### ರಸ್ತೆ ಡಿವೈಡರ್‌ಗೆ ಡಿಕ್ಕಿ ಹೊಡೆದು ಕಾರು ಪಲ್ಟಿ- ಇಬ್ಬರು ಸಾವು

ಧಾರವಾಡ ತಾಲೂಕಿನ ತೇಗೂರು ಬಳಿ ಹೆದ್ದಾರಿಯಲ್ಲಿ ರಸ್ತೆ ಡಿವೈಡರ್‌ಗೆ ಡಿಕ್ಕಿ ಹೊಡೆದು ಕಾರು ಪಲ್ಟಿಥಿಆಗಿದ್ದು ಇಬ್ಬರು ಮೃತಪಟ್ಟಿದ್ದಾರೆ. ಕಾರಿನಲ್ಲಿದ್ದ ವಿನಯ ಹಿರೇಮಠ(28), ಸಂದೀಪ್(29) ಸಾವು. ಘಟನೆಯಲ್ಲಿ ಮತ್ತೊಬ್ಬನಿಗೆ ಗಾಯಗಳಾಗಿದ್ದು ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ಕೊಡಿಸಲಾಗುತ್ತಿದೆ. ಗರಗ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

### ಅವನು ಅಶ್ವತ್ಥ್ ನಾರಾಯಣ ಅಲ್ಲ ನವರಂಗಿ ನಾರಾಯಣ: ಶಿವಕುಮಾರ್ ತಿರುಗೇಟು

ಬೆಂಗಳೂರು ಅಭಿವೃದ್ಧಿ ಸಚಿವರಲ್ಲ ನಿರ್ನಾಮ ಸಚಿವರು ಎಂಬ ಡಾ.ಅಶ್ವತ್ಥ್ ನಾರಾಯಣ ಹೇಳಿಕೆಗೆ ಡಿಸಿಎಂ ಡಿಕೆ ಶಿವಕುಮಾರ್ ತಿರುಗೇಟು ಕೊಟ್ಟಿದ್ದಾರೆ. ಅವನು ಅಶ್ವತ್ಥ್ ನಾರಾಯಣ ಅಲ್ಲ ನವರಂಗಿ ನಾರಾಯಣ ಎಂದು ಕಿಡಿಕಾರಿದ್ದಾರೆ. ಅಶ್ವತ್ಥ್ ನಾರಾಯಣ ರಾಮನಗರಕ್ಕೆ ಬಂದು ಕ್ಲೀನ್ ಮಾಡ್ತೇನಿ ಎಂದೇಳಿ ಅವರ ಪಾರ್ಟಿ ಕ್ಲೀನ್ ಮಾಡಿ ಹೋದ್ರು. ಅಶ್ವತ್ಥ್ ನಾರಾಯಣ ಸಚಿವರಾಗಿದ್ದಾಗ ಬೆಂಗಳೂರಿಗೆ ಏನು ಮಾಡಿದ್ದಾರೆ? ಬೆಂಗಳೂರು ನಗರದಲ್ಲಿ ಏನು ಮಾಡಿದ್ದಾರೆ ಎಂದು ನಾವು ಇನ್ನೂ ಬಿಚ್ಚಿಲ್ಲ. ಏನೇನು ಆಟ ಆಡಿದ್ದಾರೆ, ಯಾರನ್ನ ಎತ್ತಿಕಟ್ಟುತ್ತಿದ್ದಾರೆಂದು ಗೊತ್ತು. ಸ್ವಾತಂತ್ರ್ಯ ದಿನಾಚರಣೆ ನಂತರ ಎಲ್ಲದರ ಬಗ್ಗೆ ಮಾತಾಡುತ್ತೇನೆ ಎಂದು ಡಿಕೆ ಶಿವಕುಮಾರ್ ಟಾಂಗ್ ಕೊಟ್ಟಿದ್ದಾರೆ.

### ನಟ ಉಪೇಂದ್ರ ಮನೆಗೆ ವಿವಿಪುರಂ ವಿಭಾಗದ ಎಸಿಪಿ ನಾಗರಾಜ್ ಭೇಟಿ

ಫೇಸ್‌ಬುಕ್ ಲೈವ್‌ನಲ್ಲಿ ಉಪೇಂದ್ರ ಆಕ್ಷೇಪಾರ್ಹ ಪದ ಬಳಕೆ ಕೇಸ್‌ಗೆ ಸಂಬಂಧಿಸಿ ನಟ ಉಪೇಂದ್ರ ಮನೆಗೆ ವಿವಿಪುರಂ ವಿಭಾಗದ ಎಸಿಪಿ ನಾಗರಾಜ್ ಭೇಟಿ ನೀಡಿದ್ದಾರೆ. ಬೆಂಗಳೂರಿನ ಕತ್ರಿಗುಪ್ಪೆಯಲ್ಲಿರುವ ನಟ ಉಪೇಂದ್ರ ಮನೆಗೆ ಸಿ.ಕೆ. ಅಚ್ಚುಕಟ್ಟು ಠಾಣೆ ಪೊಲೀಸರು ಭೇಟಿ ನೀಡಿದ್ದಾರೆ.

### ನಟ ಉಪೇಂದ್ರ ವಿರುದ್ಧ ಸಚಿವ ಹೆಚ್.ಸಿ ಮಹದೇವಪ್ಪ ಆಕ್ರೋಶ

ನಟ ಉಪೇಂದ್ರರ ಪದ ಬಳಕೆಗೆ ಸಮಾಜ ಕಲ್ಯಾಣ ಸಚಿವ ಹೆಚ್.ಸಿ ಮಹದೇವಪ್ಪ ಆಕ್ರೋಶ ಹೊರ ಹಾಕಿದ್ದಾರೆ. ಉಪೇಂದ್ರ ಅವರು ಒಬ್ಬ ಖ್ಯಾತ ನಟ, ನಿರ್ಮಾಪಕ ಮತ್ತು ಒಂದು ನಿರ್ದಿಷ್ಟ ರಾಜಕೀಯ ಪಕ್ಷದ ಮೂಲಕ ಸಾರ್ವಜನಿಕ ಜೀವನದಲ್ಲಿ ಇರಲು ಬಯಸುತ್ತಿರುವ ವ್ಯಕ್ತಿ. ಆದರೆ ಸ್ವಾತಂತ್ರ್ಯ ಬಂದು 75 ವರ್ಷ ಕಳೆದರೂ ಅವರು ಜಾತಿ ಹೆಸರನ್ನು ಕರೆಯುತ್ತಿರುವುದನ್ನು ನೋಡಿದರೆ ಇದು ಸಮುದಾಯಕ್ಕೆ ಮಾತ್ರವಲ್ಲದೇ ಸಂವಿಧಾನಕ್ಕೂ ಮಾಡಿದ ಅಪಚಾರ ಆಗಿದೆ ಎಂದು ಆಕ್ರೋಶ ಹೊರ ಹಾಕಿದ್ದಾರೆ.

### ಸಿದ್ಧಗಂಗಾ ಮಠಕ್ಕೆ ಗೃಹ ಸಚಿವ ಪರಮೇಶ್ವರ್ ಭೇಟಿ

ಸಿದ್ಧಗಂಗಾ ಮಠದ ಗೋಕಟ್ಟೆಯಲ್ಲಿ ಮುಳುಗಿ ನಾಲ್ವರ ಸಾವು ಪ್ರಕರಣಕ್ಕೆ ಸಂಬಂಧಿಸಿ ಸಿದ್ಧಗಂಗಾ ಮಠಕ್ಕೆ ಗೃಹ ಸಚಿವ ಡಾ.ಜಿ.ಪರಮೇಶ್ವರ್ ಭೇಟಿ ನೀಡಿದ್ದಾರೆ. ಈ ವೇಳೆ ಸಿದ್ದಲಿಂಗ ಸ್ವಾಮೀಜಿಗಳ ಆಶೀರ್ವಾದ ಪಡೆದ್ರು. ಬಳಿಕ ತುಮಕೂರು ಜಿಲ್ಲಾಧಿಕಾರಿ ಕೆ.ಶ್ರೀನಿವಾಸ್, ಜಿ.ಪಂ.ಸಿಇಒ ಪ್ರಭು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಾಹುಲ್ ಕುಮಾರ್ ಅವರ ಬಳಿ ಘಟನೆ ಕುರಿತು ಮಾಹಿತಿ ಪಡೆದರು.

# ಕವಾಡಿಗರಹಟ್ಟಿಯಲ್ಲಿ ಮೃತ ಕುಟುಂಬಗಳಿಗೆ ಆಹಾರ ಧಾನ್ಯ ವಿತರಣೆ ಜೊತೆಗೆ ಹಣದ ನೆರವು

» ಚಿತ್ರದುರ್ಗ



ಕವಾಡಿಗರಹಟ್ಟಿಯಲ್ಲಿ ಕಲುಷಿತ ನೀರು ಸೇವಿಸಿ ಮೃತಪಟ್ಟಿರುವ ಐದು ಕುಟುಂಬಗಳಿಗೆ ಮಾದಿಗ ನೌಕರರ ಸಾಂಸ್ಕೃತಿಕ ಸಂಘದಿಂದ ಐ.ಯು.ಡಿ.ಪಿ.ಲೇಔ□□ನಲ್ಲಿರುವ ಜಂಬೂ ದ್ವೀಪ ಕರ್ನಾಟಕ ಮಹಾತ್ಮಪುಲೆ ಅಧ್ಯಯನ ಕೇಂದ್ರದಲ್ಲಿ ಆಹಾರ ಧಾನ್ಯ ಹಾಗೂ ಹಣದ ನೆರವು ನೀಡಲಾಯಿತು.

ಮಾದಿಗ ನೌಕರರ ಸಾಂಸ್ಕೃತಿಕ ಸಂಘದ ಕಾರ್ಯದರ್ಶಿ ರೇವಣಸಿದ್ದಪ್ಪ ಪು□□ಕಿ□□ಗಳನ್ನು ವಿತರಿಸಿ ಮಾತನಾಡುತ್ತ ಇದೊಂದು ಚಿಕ್ಕ ಸಹಾಯ. ದೊಡ್ಡ ಮಟ್ಟದಲ್ಲಿ ಪರಿಹಾರ ನೀಡಲು ಸರ್ಕಾರವಿದೆ. ಕವಾಡಿಗರಹಟ್ಟಿಯಲ್ಲಿ ಇಂತಹ ಘಟನೆ ನಡೆದಿರುವುದು ನೋವಿನ ಸಂಗತಿ. ಹಾಗಾಗಿ ವೈಯಕ್ತಿಕವಾಗಿ ಸ್ವಚ್ಚತೆಯನ್ನು ಕಾಪಾಡಿಕೊಳ್ಳಿ ಎಂದು ಮನವಿ ಮಾಡಿದರು.

ಐವರು ಮೃತಪಟ್ಟಿರುವ ಕುಟುಂಬಗಳ ಸರ್ವೆ ನಡೆಸಿ ಯಾರಾದರೂ ಮಕ್ಕಳು ಓದುವವರಿದ್ದರೆ. ಅವರಿಗೆ ಮುಂದಿನ ಶಿಕ್ಷಣಕ್ಕೆ ಏನು ಅನುಕೂಲ ಮಾಡಬಹುದು ಎನ್ನುವುದನ್ನು ಸಂಘದಲ್ಲಿ ಚರ್ಚಿಸಿ ಮುಂದಿನ ತೀರ್ಮಾನ ತೆಗೆದುಕೊಳ್ಳಲಾಗುವುದು ಎಂದು ಭರವಸೆ ನೀಡಿದರು.ಮಾದಿಕ ನೌಕರರ ಸಾಂಸ್ಕೃತಿಕ ಸಂಘದ ಅಧ್ಯಕ್ಷ ಚಂದ್ರಪ್ಪ ಮಾತನಾಡುತ್ತ. ಕವಾಡಿಗರಹಟ್ಟಿಯಲ್ಲಿ ಕಹಿ ಘಟನೆ ನಡೆದಿರುವುದು ದುಃಖದ ಸಂಗತಿ. ಕುಡಿಯುವ ನೀರಿನಲ್ಲಿ ಏನು ಮಿಶ್ರಣವಾಗಿದೆ. ಅಗಿಲ್ಲ ಎನ್ನುವ ವಾದ ಬೇಡ. ನಿಮ್ಮ ಕಷ್ಟಕ್ಕೆ ನಾವುಗಳು ಸದಾ ಜೊತೆಗಿರುತ್ತೇವೆ. ಮಾದಿಗ ನೌಕರರೆಲ್ಲಾ ಸೇರಿ ನಿಮಗೆ ನೆರವು ನೀಡಬೇಕೆಂಬ ಉದ್ದೇಶದಿಂದ ಆಹಾರ ಪದಾರ್ಥಗಳನ್ನು ನೀಡುತ್ತಿದ್ದೇವೆ. ಮುಂದಿನ ದಿನಗಳಲ್ಲಿ ಸೇವನೆಗೆ ಯೋಗ್ಯವಲ್ಲದ ನೀರನ್ನು ಕುಡಿದು ಆರೋಗ್ಯಹಾಳು ಮಾಡಿಕೊಳ್ಳುವುದು ಬೇಡ. ನಿಮ್ಮ ಜೀವಕ್ಕೆ ನೀವೆ ಹೊಣೆಗಾರರು ಎಂದು ಹೇಳಿದರು. ಮಾದಿನ ನೌಕರರ ಸಾಂಸ್ಕೃತಿಕ ಸಂಘದ ಕಾರ್ಯದರ್ಶಿ ರಾಘವೇಂದ್ರ, ತಾಲ್ಲೂಕು ಸಂಘದ ಗೌರವಾಧ್ಯಕ್ಷ ಕೆ.ವೀರಣ್ಣ, ಅಧ್ಯಕ್ಷ ಬಿ.ಹೆಚ್.ಶಿವಪ್ರಕಾಶ್, ಕಾರ್ಯದರ್ಶಿ ಶ್ರೀನಿವಾ□□ಮೂರ್ತಿ, ಖಜಾಂಚಿ ತಿಪ್ಪೇಸ್ವಾಮಿ, ಜಂಬೂದ್ವೀಪ ರಾಜ್ಯಾಧ್ಯಕ್ಷ ರಾಮಣ್ಣ, ಶಿಕ್ಷಕಿ ಲೋಲಾಕ್ಷಮ್ಮ, ಮಲ್ಲಿಕಾರ್ಜುನ್ ಎ. ನಿವೃತ್ತ ಸ□□ಇ□□□□ಪೆಕ್ಟರ್ ನಾಗರಾಜ್, ಬಸವರಾಜ್, ಸಿದ್ದೇಶ್, ಗುರುನಾಥ್, ಹನುಮಂತಪ್ಪ, ಕರಿಯಪ್ಪ, ಮಲ್ಲಿಕಾರ್ಜುನಸ್ವಾಮಿ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

# ಆ.31ರಂದು ನುಲಿಯ ಚಂದಯ್ಯ ಜಯಂತಿ

» ದಾವಣಗೆರೆ



ಕಾಯಕ ಯೋಗಿ ನುಲಿಯ ಚಂದಯ್ಯ ಹಾಗೂ ಬ್ರಹ್ಮಶ್ರೀ ನಾಂಯಾಂಯಣಗುರುಗಳ ಜಯಂತಿಯನ್ನು ಆ.31ರಂದು ಅರ್ಥಪೂರ್ಣವಾಗಿ ಆಚರಿಸೋಣ ಎಂದು ಅಪರ ಜಿಲ್ಲಾಧಿಕಾರಿ ಪಿ.ಎನ್ ಲೋಕೇಶ್ ತಿಳಿಸಿದರು.

ಸೋಮವಾರ ಜಿಲ್ಲಾಡಳಿತ ಭವನದ ಅಪರ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ನಡೆದ ನುಲಿಯ ಚಂದಯ್ಯ ಹಾಗೂ ಬ್ರಹ್ಮಶ್ರೀ ನಾಯಾಯಣಗುರು ಜಯಂತಿ ಪೂರ್ವಭಾವಿ ಸಿದ್ದತಾ ಸಭೆಯಲ್ಲಿ ಅವರು ಮಾತನಾಡಿದರು.

ಆಗಸ್ಟ್ 31ರಂದು ಜಿಲ್ಲಾಡಳಿತ ಭವನದ ತುಂಗಭದ್ರ ಸಭಾಂಗಣದಲ್ಲಿ ಬೆಳಗ್ಗೆ 11ರಿಂದ ಬ್ರಹ್ಮಶ್ರೀ ನಾಯಾಯಣಗುರು ಜಯಂತಿ ಹಾಗೂ ಮಧ್ಯಾಹ್ನ 3 ಗಂಟೆಗೆ ನುಲಿಯ ಚಂದಯ್ಯ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲು ತೀರ್ಮಾನಿಸಲಾಗಿದೆ.

ಮಹಾನೀಯರ ವ್ಯಕ್ತಿತ್ವದ ಚಿತ್ರಣವನ್ನು ನೃತ್ಯ, ನಾಟಕ ಹಾಗೂ ಉಪನ್ಯಾಸಗಳ ಮೂಲಕ ಮುಂದಿನ ಪೀಳಿಗೆಗೆ ಉಣಬಡಿಸಬೇಕಾಗಿದೆ, ಎಲ್ಲಾ ಶಾಲೆ ಹಾಗೂ ಗ್ರಾಮ ಪಂಚಾಯಿತಿಗಳಲ್ಲಿ ಇಂತಹ ಶರಣರ ಜಯಂತಿಯನ್ನು ಆಚರಿಸಲು ಸುತ್ತೋಲೆ ಹೊರಡಿಸ ಲಾಗುವುದು, ಶರಣರ ಅನುಭವ ಹಾಗೂ ಅನುಭಾವವನ್ನು ಜಯಂತಿಗಳ ಮೂಲಕ ತಿಳಿಸಬೇಕು ಎಂದರು. ನುಲಿಯ ಚಂದಯ್ಯನವರು 12ನೇ ಶತಮಾನದ ವಚನಕಾರರಾಗಿದ್ದು, ಬಸವಣ್ಣನವರ ಸಮಕಾಲೀನರಾಗಿದ್ದಾರೆ, ಕಾಯಕ ಮತ್ತು ದಾಸೋಹದ ಮೂಲಕ ಸಮಾಜಕ್ಕೆ ಬೆಳಕು ನೀಡಿದ್ದಾರೆ. ಸಮಾಜಿಕ ಕ್ರಾಂತಿಯ ಹರಿಕಾರ ನಾರಾಯಣ ಗುರುಗಳ ಸಂದೇಶಗಳನ್ನು ಸಮಾಜಕ್ಕೆ ತಿಳಿಸಬೇಕು ಎಂದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ರವಿಚಂದ್ರ, ಬ್ರಹ್ಮಶ್ರೀ ಸಮಾಜದ ಅಧ್ಯಕ್ಷ ಶಂಕರ್ ಹಾಗೂ ಸಮಾಜದ ಮುಖಂಡರು ಉಪಸ್ಥಿತರಿದ್ದರು.

# ಹಾಲಿ ಸಾಗುವಳಿದಾರರಿಗೆ ಹಕ್ಕುಪತ್ರ ನೀಡುಲು ಒತ್ತಾಯ



» ಚಿತ್ರದುರ್ಗ

ಹಿರಿಯೂರು ತಾಲ್ಲೂಕು ಕಸಬಾ ಹೋಬಳಿ ಯರಕೇನಾಗೇನಹಳ್ಳಿ ರಿ.ಸ.ನಂ. 24 ರಲ್ಲಿನ 30 ಎಕರೆ 18 ಗುಂಟೆ ಸರ್ಕಾರಿ ಎಕ್ಸೈಜ್ ಖರಾಜ್ ಜಮೀನಿನಲ್ಲಿ 4 ಎಕರೆ 38 ಗುಂಟೆ ಜಮೀನಿನ ಭೂಮಂಜೂರಾತಿಯನ್ನು ತಡೆಹಿಡಿಯುವಂತೆ ಯರಕೇನಾಗೇನಹಳ್ಳಿ ಕುರುಬರಹಳ್ಳಿ ಗ್ರಾಮಸ್ಥರು ಜಿಲ್ಲಾಧಿಕಾರಿ ಕಚೇರಿ ಎದುರು ಸೋಮವಾರ ಪ್ರತಿಭಟನೆ ನಡೆಸಿ ಡಿಸಿ. ಕಚೇರಿ ತಹಶೀಲ್ದಾ□□ಗೆ ಮನವಿ ಸಲ್ಲಿಸಿದರು.

ಮಾಜಿ ಸೈನಿಕ ಬೆಂಗಳೂರು ವಾಸಿ ಹರ್ಷ ಎಸ್. ಇವರಿಗೆ 4 ಎಕರೆ 38 ಗುಂಟೆ ಜಮೀನನ್ನು ಮಂಜೂರು ಮಾಡುವ ಕುರಿತು ಹಿರಿಯೂರು ತಹಶೀಲ್ದಾರ್ ಪ್ರಸ್ತಾವನೆಯನ್ನು ಉಪವಿಭಾಗಾಧಿಕಾರಿಗೆ ಸಲ್ಲಿಸಿರುತ್ತಾರೆ. ಸದರಿ ರಿ.ಸ.ನಂ.24 ರ ಸರ್ಕಾರಿ ಎಕ್ಸೈಜ್ ಖರಾಬು ಜಮೀನಿನಲ್ಲಿ ಲಂಬಾಣಿ ಜನಾಂಗಕ್ಕೆ ಸೇರಿದ 20 ಮಂದಿ ಹತ್ತು ಹದಿನೈದು ವರ್ಷಗಳಿಂದಲೂ ಸಾಗುವಳಿ ಮಾಡಿಕೊಂಡು ಬರುತ್ತಿದ್ದು, ನಮೂನೆ 53 ಮತ್ತು 57 ರಲ್ಲಿ ಅರ್ಜಿಗಳನ್ನು ಸಲ್ಲಿಸಿದ್ದರೂ ಹಿರಿಯೂರು ತಾಲ್ಲೂಕು ಕಚೇರಿ ಹಾಗೂ ಸರ್ವೆ ಅಧಿಕಾರಿಗಳು ಕೂಲಂಕುಷವಾಗಿ ಪರಿಶೀಲನೆ ಮಾಡದೆ ಅವೈಜ್ಞಾನಿಕವಾಗಿ ವರದಿ ತಯಾರಿಸಿ ಉಪವಿಭಾಗಾಧಿಕಾರಿಗೆ ಸಲ್ಲಿಸಿರುವುದರಿಂದ ಭೂ ಮಂಜೂರಾತಿಯನ್ನು ತಡೆಹಿಡಿದು ಹಾಲಿ ಸಾಗುವಳಿ ಮಾಡುತ್ತಿರುವವರಿಗೆ ಹಕ್ಕುಪತ್ರಗಳನ್ನು ನೀಡುವಂತೆ ಪ್ರತಿಭಟನಾಕಾರರು ಒತ್ತಾಯಿಸಿದರು.

ಪ್ರಕಾಶ ಎಲ್. ಪಿ.ಮಂಜನಾಯ್ಕ, ಕಣಮನಾಯ್ಕ, ಕರ್ನಾಟಕ ರಾಜ್ಯ ಬಂಜಾರ ಜನಜಾಗೃತಿ ಅಭಿಯಾನ ಸಮಿತಿಯ ಪ್ರಧಾನ ಕಾರ್ಯದರ್ಶಿ ಆರ್.ನಿಂಗಾನಾಯ್ಕ, ಕರ್ನಾಟಕ ಶಾಂತಿ ಮತ್ತು ಸೌಹಾರ್ದ ವೇದಿಕೆ ಅಧ್ಯಕ್ಷ ಆರ್.ನರೇನಹಳ್ಳಿ ಅರು□□ಕುಮಾರ್, ಪಾಪನಾಯ್ಕ, ಸುರೇ□□ನಾಯ್ಕ, ಚಂದ್ರನಾಯ್ಕ, ರಾಮಾಂಜನಿನಾಯ್ಕ, ಗುರುರಾಜ, ಪುಟ್ಟಿಭಾಯಿ, ಮೀನಾಕ್ಷಿಭಾಯಿ, ಲಕ್ಷ್ಮಿಭಾಯಿ, ಚಂದ್ರನಾಯ್ಕ ಇನ್ನು ಅನೇಕರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

# ಹತ್ತು ಡ್ರಿಂಕ್ ಅಂಡ್ ಡ್ರೈವ್ ಪ್ರಕರಣ ದಾಖಲು



» ಚಿತ್ರದುರ್ಗ

ಬಡಾವಣೆ ಠಾಣೆಯ ವೃತ್ತ ನಿರೀಕ್ಷಕ ಹಾಗೂ ಪ್ರೊಬೇಷನರಿ ಡಿ.ವೈ.ಎಸ್ಪಿ. ಗೋವರ್ಧನ್ ಗೋಪಾಲ್ ಇವರುಗಳು ಬಡಾವಣೆ ಪೊಲೀಸ್ ಠಾಣೆ ವ್ಯಾಪ್ತಿಯ ಚಳ್ಳಕೆರೆ ಸರ್ಕಲ್, ಹಳೆ ಬೆಂಗಳೂರು ರಸ್ತೆ ಹಾಗೂ ಹೊಸ ಲೇಔ□□ಗಳಲ್ಲಿ ಸಂಚಾರಿ ನಿಯಮ ಉಲ್ಲಂಘಿಸಿ ವಾಹನ ಚಾಲನೆ ಮಾಡುತ್ತಿರುವವರ ವಿರುದ್ಧ ಕ್ರಮ ಕೈಗೊಂಡು ಮದ್ಯ ಸೇವಿಸಿ ವಾಹನ ಚಾಲನೆ ಮಾಡುತ್ತಿದ್ದವರನ್ನು ತಡೆದು ಹತ್ತು ಡ್ರಿಂಕ್ ಅಂಡ್ ಡ್ರೈವ್ ಪ್ರಕರಣಗಳನ್ನು ದಾಖಲಿಸಿ ಮದ್ಯಪಾನ ಮಾಡಿ ವಾಹನಗಳನ್ನು ಚಲಾಯಿಸುವುದಿಂದ ಅಪಘಾತ ಸಂಭವಿಸಿ ಪ್ರಾಣ ಹಾನಿಯಾಗುವುದನ್ನು ತಡೆಗಟ್ಟುವ ಕುರಿತು ಜಾಗೃತಿ ಮೂಡಿಸಿದರು.

# ಸ್ಥಿರಾಸ್ತಿಗಳ ಮಾರ್ಗಸೂಚಿ ಬೆಲೆಗಳ ಪರಿಷ್ಕರಣೆ

» ದಾವಣಗೆರೆ

ಪ್ರಸಕ್ತ ಸಾಲಿನಲ್ಲಿ ಚನ್ನಗಿರಿ ಉಪನೋಂದಣಿ ಕಚೇರಿಯ ವ್ಯಾಪ್ತಿಯಲ್ಲಿ ಬರುವ ಚನ್ನಗಿರಿ ನಗರ, ಮತ್ತು ಗ್ರಾಮಾಂತರ ಪ್ರದೇಶದ ಕೃಷಿ ಜಮೀನು ಹಾಗೂ ಕೃಷಿಯೇತರ ಆಸ್ತಿಗಳ ಮಾರ್ಗಸೂಚಿ ಬೆಲೆಯನ್ನು ಪರಿಷ್ಕರಿಸುವ ಸಲುವಾಗಿ ಆಗಸ್ಟ್ 11 ರಂದು ತಹಶೀಲ್ದಾರ್ ಹಾಗೂ ತಾಲ್ಲೂಕು ಮೌಲ್ಯಮಾಪನ ಉಪಸಮಿತಿ, ಅಧ್ಯಕ್ಷರ ಅಧ್ಯಕ್ಷತೆಯಲ್ಲಿ ತಾಲ್ಲೂಕು ಕಚೇರಿ ಆವರಣದಲ್ಲಿ ಸರ್ವ ಸದಸ್ಯರ ಸಭೆ ಆಯೋಜಿಸಲಾಗಿತ್ತು. ಈ ಸಭೆಯಲ್ಲಿ ಸರ್ಕಾರಿ ಅಂದಾಜು ಮಾರ್ಗ ಸೂಚಿ ಬೆಲೆಗಳನ್ನು 2023-24ನೇ ಸಾಲಿನಲ್ಲಿ ಪರಿಷ್ಕರಿಸುವ ಸಂಬಂಧ ಚರ್ಚಿಸಿ, ಸರ್ವ ಸದಸ್ಯರ ಅಭಿಪ್ರಾಯದಂತೆ ಚಾಲ್ತಿ ಇರುವ ಮಾರ್ಗ ಸೂಚಿಬೆಲೆ 2019-20ನೇ ಸಾಲಿನಲ್ಲಿ ಪರಿಷ್ಕೃತಗೊಂಡಿದ್ದು ನಂತರದಲ್ಲಿ ಪರಿಷ್ಕರಣೆಗೊಂಡಿರುವುದಿಲ್ಲ. ಆದ್ದರಿಂದ ಚಾಲ್ತಿ ಇರುವ ದರಗಳ ಪರಿಷ್ಕರಣೆ ಮಾಡುವುದು ಸೂಕ್ತವೆಂದು ತೀರ್ಮಾನಿಸಿ ಆ.12 ರಿಂದ 15 ದಿವಸಗಳೊಳಗಾಗಿ ಸಾರ್ವಜನಿಕರಿಂದ ಆಕ್ಷೇಪಣೆ, ಸಲಹೆ ಮತ್ತು ಸೂಚನೆಗಳನ್ನು ದಾಖಲಾತಿಗಳ ಆಧಾರಗಳ ಮೇಲೆ ಸಕಾರಣಗಳೊಂದಿಗೆ ತಮ್ಮ ಅಹವಾಲುಗಳನ್ನು ಲಿಖಿತ ರೂಪದಲ್ಲಿ ತಹಸೀಲ್ದಾರ್ , ಉಪನೋಂದಣಾಧಿಕಾರಿಗಳು ಚನ್ನಗಿರಿಗೆ ಸಲ್ಲಿಸುವುದು.

# ವಿಜಯಪುರದಲ್ಲಿ 250 ಮೀಟರ್ ಉದ್ದರ ರಾಷ್ಟ್ರ ಧ್ವಜ ಮೆರವಣಿಗೆ

ನಾಳೆ ಸ್ವಾತಂತ್ರ್ಯ ದಿನಾಚರಣೆ ಹಿನ್ನಲೆ ವಿಜಯಪುರ ನಗರದಲ್ಲಿ ಬೃಹತ್ ರಾಷ್ಟ್ರ ಧ್ವಜ ಪ್ರದರ್ಶನ ನಡೆದಿದೆ. ನಗರದ ದರಬಾರ್ ಹೈಸ್ಕೂಲ್‌ನಿಂದ ಕನಕದಾಸ ವೃತ್ತ, ಅಂಬೇಡ್ಕರ್ ಸರ್ಕಲ್, ಬಸವೇಶ್ವರ ಸರ್ಕಲ್, ಗಾಂಧಿಚೌಕ್ ಮಾರ್ಗವಾಗಿ ಸಿದ್ದೇಶ್ವರ ದೇವಸ್ಥಾನದವರೆಗೂ 250 ಮೀಟರ್ ಉದ್ದರ ರಾಷ್ಟ್ರ ಧ್ವಜ ಮೆರವಣಿಗೆ ನಡೆದಿದೆ. ವಿವಿಧ ಶಾಲಾ ಕಾಲೇಜಿನ ವಿದ್ಯಾರ್ಥಿಗಳು ಮೆರವಣಿಗೆಯಲ್ಲಿ ಭಾಗಿಯಾಗಿದ್ದಾರೆ.

## ಪ್ರಮುಖ ಸುದ್ದಿ

# ಬೆಸ್ಕಾಂ ಚೆಲ್ಲಾಟ ಬಿಟ್ಟು ಸಮಯಕ್ಕೆ ವಿದ್ಯುತ್ ಒದಗಿಸಲಿ

» ಚಿತ್ರದುರ್ಗ



ರೈತರ ಪಂ□□ಸೆ□□ಗಳಿಗೆ ಗುಣ ಮಟ್ಟದ ವಿದ್ಯುತ್ ನೀಡುವಂತೆ ಒತ್ತಾಯಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರುಸೇನೆ ವತಿಯಿಂದ ಬೆಸ್ಕಾಂ ಇಲಾಖೆ ಎದುರು ಸೋಮವಾರ ಪ್ರತಿಭಟನೆ ನಡೆಸಿ ಕಾರ್ಯನಿರ್ವಾಹಕ ಅಭಿಯಂತರರಿಗೆ ಮನವಿ ಸಲ್ಲಿಸಲಾಯಿತು.

ಮೊದಲೇ ಬರಪೀಡಿತ ಪ್ರದೇಶವೆಂಬ ಹಣೆಪಟ್ಟಿ ಕಟ್ಟಿಕೊಂಡಿರುವ ಚಿತ್ರದುರ್ಗ ಜಿಲ್ಲೆಯಲ್ಲಿ ನಾಲ್ಕು ದಿನಗಳಿಂದ ಸರಿಯಾಗಿ ವಿದ್ಯುತ್ ಪೂರೈಕೆಯಾಗುತ್ತಿಲ್ಲ. ತೋಟಗಾರಿಕೆ ಬೆಳೆಗಳಾದ ಈರುಳ್ಳಿ, ಮೆಕ್ಕೆಜೋಳ, ಹಣ್ಣು, ಹೂವು, ತರಕಾರಿ ಬಾಡುತ್ತಿದ್ದು, ನುಸಿ ರೋಗಕ್ಕೆ ತುತ್ತಾಗುವ ಸಂಭವವಿದೆ. ಸರ್ಕಾರ ಮತ್ತು ಬೆಸ್ಕಾಂ ಇಲಾಖೆ ರೈತರ ಜೊತೆ ಚೆಲ್ಲಾಟವಾಡುವುದನ್ನು ಬಿಟ್ಟು ನೆರವಿಗೆ ಮುಂದೆಬರಬೇಕುಎಂದುಪ್ರತಿಭಟನಾನಿರತ ರೈತರು ಒತ್ತಾಯಿಸಿದರು.

ಕಳೆದ ಮೂರು ವರ್ಷಗಳಿಂದ ಈರುಳ್ಳಿ ಇನ್ನು ಅನೇಕ ಬೆಳೆಗಳು ಹಾಳಾಗಿದ್ದು, ಕೃಷಿ ಸಾಲ ಮಾಡಿರುವ ರೈತ ಆತ್ಮಹತ್ಯೆ ಮಾಡಿಕೊಳ್ಳುತ್ತಿದ್ದಾನೆ. ಪುನಃ ಈ ವರ್ಷ ರೈತ ಸಾಲ ಮಾಡಿ ಈರುಳ್ಳಿ ಬಿತ್ತನೆ ಮಾಡಿದ್ದು, ಉಳಿಸಿಕೊಳ್ಳಲು ಹರಸಾಹಸ ಪಡುವಂತಾಗಿದೆ. ಈರುಳ್ಳಿ ದಾಸ್ತಾನು ಕಡಿಮೆಯಾಗಿರುವುದರಿಂದ ಅಭಾವವಾಗುವ ಸಾಧ್ಯತೆಗಳಿವೆ. ಅಕ್ರಮ-ಸಕ್ರಮದಡಿ ಹಣ ಪಾವತಿಸಿರುವ ರೈತರಿಗೆ ಕೂಡಲೆ ಮೂಲಭೂತ ಸೌಕರ್ಯಗಳನ್ನು ಒದಗಿಸಬೇಕು.ರೈತರ ಪಂ□□ಸೆ□□ಗಳ ಆರ್.ಆರ್.ನಂಬ□□ಗಳಿಗೆ ಆಧಾರ್ ನಂಬರ್ ಜೋಡಿಸುವುದನ್ನು ತಕ್ಷಣದಿಂದ ನಿಲ್ಲಿಸಬೇಕು. ಇಲ್ಲವಾದಲ್ಲಿ ಎಲ್ಲಾ ಮೀಟ□□ಗಳನ್ನು ತಂದು ನಿಮ್ಮ ಇಲಾಖೆ ಮುಂದೆ ಎಸೆಯುತ್ತೇವೆ. ಹಗಲಿನಲ್ಲಿ ಎಂಟು ಗಂಟೆ ಗುಣಮಟ್ಟದ ವಿದ್ಯುತ್ ಪೂರೈಸಬೇಕು ಎಂದು ರೈತರು ಆಗ್ರಹಿಸಿದರು. ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರುಸೇನೆ ಜಿಲ್ಲಾಧ್ಯಕ್ಷ ಡಿ.ಎಸ್.ಹಳ್ಳಿ ಮಲ್ಲಿಕಾರ್ಜುನ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ರಾಮರೆಡ್ಡಿ, ರೈತ ಮುಖಂಡರುಗಳಾದ ಈಚಘಟ್ಟದ ಸಿದ್ದವೀರಪ್ಪ, ಇ.ಎನ್.ಲಕ್ಷ್ಮಿಕಾಂತ್ , ಆರ್. ಆರ್.ಮಾರುತಿ, ಟಿ.ಚೇತನ್, ಜಗನ್ನಾಥ, ಸದಾಶಿವಪ್ಪ, ಸಿ.ಸತೀಶ್, ಎಸ್.ಪ್ರವೀಣ ಇನ್ನು ಮುಂತಾದವರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

## ಫಾಸ್ಟ್ ನ್ಯೂಸ್

### ಆಳಂದದ ಕೆಲ ಗ್ರಾಮಗಳಲ್ಲಿ ಚಿರತೆ ಪ್ರತ್ಯಕ್ಷ

ಕಲಬುರಗಿ ಜಿಲ್ಲೆಯ ಆಳಂದ ತಾಲೂಕಿನ ಬಂಗರಗಾ, ಸಾಲೆಗಾಂವ್ ಸೇರಿ ಕೆಲ ಗ್ರಾಮದಲ್ಲಿ ಚಿರತೆ ಪ್ರತ್ಯಕ್ಷವಾಗಿದೆ. ಬಂಗರಗಾ ಗ್ರಾಮದ ಕೆರೆಯಲ್ಲಿ ಚಿರತೆ ಹೆಜ್ಜೆ ಗುರುತು ಪತ್ತೆಯಾಗಿದ್ದು ಗ್ರಾಮಸ್ಥರು ಬೆಚ್ಚಿಬಿದ್ದಿದ್ದಾರೆ.

### ಬಾಲಕನ ಮೇಲೆ ಬೀದಿ ನಾಯಿಗಳ ಅಟ್ಟಹಾಸ

ಬೆಳಗಾವಿ ನಗರದಲ್ಲಿ ಬಾಲಕನ ಮೇಲೆ ಬೀದಿ ನಾಯಿಗಳು ಅಟ್ಟಹಾಸ ಮೆರೆದಿವೆ. ಮನಬಂದಂತೆ ಕಚ್ಚಿ ಗಾಯಗೊಳಿಸಿವೆ. ನಾಯಿಗಳು ಬಾಲಕನ ಮೇಲೆ ದಾಳಿ ಮಾಡಿದ್ದನ್ನು ಗಮನಿಸಿದ ಸ್ಥಳೀಯರು ನಾಯಿಗಳನ್ನ ಓಡಿಸಿ ಬಾಲಕನನ್ನು ರಕ್ಷಣೆ ಮಾಡಿದ್ದಾರೆ. ಬೆಳಗಾವಿಯ ಸಂಗಮೇಶ್ವರ ನಗರದ ಅರ್ಕಾನ್ ರಿಯಾಜ್ (08) ಗಾಯಗೊಂಡ ಬಾಲಕ. ನಾಯಿ ದಾಳಿಯಿಂದ ಬಾಲಕನ ತಲೆ, ಬೆನ್ನಿಗೆ ಗಂಭೀರ ಗಾಯಗಳಾಗಿವೆ. ಬೆಳಗಾವಿಯ ಖಾಸಗಿ ಆಸ್ಪತ್ರೆಗೆ ದಾಖಲಿಸಿ ಬಾಲಕನಿಗೆ ಚಿಕಿತ್ಸೆ ಕೊಡಿಸಲಾಗುತ್ತಿದೆ.

### ಬೆಳ್ಳುಳ್ಳಿ ಬೆಲೆಯಲ್ಲಿ ಏರಿಕೆ

ಟೊಮೆಟೊ ಬೆಲೆ ಕುಸಿದು ಈರುಳ್ಳಿ, ಬೆಳ್ಳುಳ್ಳಿ ಬೆಲೆ ಏರಿಯಾಗುತ್ತಿದೆ. ಕೆಜಿ ಬೆಳ್ಳುಳ್ಳಿಗೆ 200 ರೂಪಾಯಿ ಇದೆ. ಹೊಸ ಕ್ರಾಫ್ಟ್ ಬರುವವರಿಗೂ ಇದೆ ಬೆಲೆ ಮುಂದುವರಿಯುವ ಸಾಧ್ಯಾತೆ. ಕಳೆದ ಎರಡು ತಿಂಗಳಿನಿಂದ ಬೆಳ್ಳುಳ್ಳಿ ಬೆಲೆ ಜಾಸ್ತಿಯಾಗಿದೆ.

### ಪ್ರಿಯಕರನೊಂದಿಗೆ ಸೇರಿ ಪತಿಯನ್ನೇ ಕೊಂದ ಪತ್ನಿ

ಚಿಕ್ಕಮಗಳೂರು ಜಿಲ್ಲೆ ಕಡೂರು ತಾಲೂಕಿನ ಹನುಮನಹಳ್ಳಿಯಲ್ಲಿ ಪ್ರಿಯಕರನೊಂದಿಗೆ ಸೇರಿ ಪತಿಯನ್ನೇ ಪತ್ನಿ ಕೊಂದ ಘಟನೆ ನಡೆದಿದೆ. ಊಟದಲ್ಲಿ ನಿದ್ರೆ ಮಾತ್ರೆ ಹಾಕಿ ಪತಿ ಸಂಜಯ್‌ನನ್ನು ಪತ್ನಿ ಪಾವನಾ ಕೊಂದಿದ್ದಾಳೆ. ಆಗಸ್ಟ್ 6ರಂದು ಯಗಟಿ ಕೆರೆ ಬಳಿ ನವೀನ್ ಮೃತದೇಹ ಪತ್ತೆಯಾಗಿತ್ತು. ಸಹಜ ಸಾವಲ್ಲ, ಕೊಲೆ ಮಾಡಿರುವ ಬಗ್ಗೆ ಅನುಮಾನ ವ್ಯಕ್ತಪಡಿಸಿ ಯಗಟಿ ಪೊಲೀಸ್ ಠಾಣೆಯಲ್ಲಿ ನವೀನ್ ಪೋಷಕರು ದೂರು ದಾಖಲಿಸಿದ್ದರು. ತನಿಖೆ ವೇಳೆ ಪ್ರಿಯಕರನೊಂದಿಗೆ ಸೇರಿ ಪತಿಯನ್ನು ಕೊಂದಿದ್ದು ಬೆಳಕಿಗೆ ಬಂದಿದೆ.

### ಪ್ರವಾಸಿ ಮಂದಿರದಲ್ಲಿ ಕೆಎಸ್‌ಆರ್‌ಪಿ ಹೆಡ್‌ಕಾನ್ಸ್‌ಟೇಬಲ್ ಮೃತ ದೇಹ ಪತ್ತೆ

ಹಾಸನ ನಗರದ ಎನ್.ಆರ್.ವೃತ್ತದ ಸಮೀಪ ಇರೋ ಪ್ರವಾಸಿ ಮಂದಿರದಲ್ಲಿ ಕೆಎಸ್‌ಆರ್‌ಪಿ ಹೆಡ್‌ಕಾನ್ಸ್‌ಟೇಬಲ್ ರಾಜೇಂದ್ರ(51) ಮೃತ ದೇಹ ಪತ್ತೆಯಾಗಿದೆ. ರಾತ್ರಿ ವೇಳೆ ಮೆಟ್ಟಿಲು ಇಳಿಯುವಾಗ ಕಾಲು ಜಾರಿ ತಲೆಗೆ ಬಲವಾದ ಪೆಟ್ಟು ಬಿದ್ದು ಅಥವಾ ನೆಲಕ್ಕೆ ಬಿದ್ದ ವೇಳೆ ಹೃದಯಾಘಾತದಿಂದಲೋ ಸಾವನ್ನಪ್ಪಿರುವ ಶಂಕೆ ವ್ಯಕ್ತವಾಗಿದೆ. ರಾಜೇಂದ್ರ ಕೆಎಸ್‌ಆರ್‌ಪಿ ಹನ್ನೊಂದನೆ ಬ್ಯಟಾಲಿಯನ್‌ನ ಹೆಡ್‌ಕಾನ್ಸ್‌ಟೇಬಲ್.

### ಲೋ ಬಿಪಿಯಿಂದ ಹೃದಯಾಘಾತಕ್ಕೆ ವಿದ್ಯಾರ್ಥಿನಿ ಸಾವು

ಲೋ ಬಿಪಿಯಿಂದ ಹೃದಯಾಘಾತವಾಗಿ ನರ್ಸಿಂಗ್ ವಿದ್ಯಾರ್ಥಿನಿ ಸಾವನ್ನಪ್ಪಿರುವ ಘಟನೆ ದಕ್ಷಿಣ ಕನ್ನಡ ಜಿಲ್ಲೆಯ ಬೆಳ್ತಂಗಡಿ ತಾಲೂಕಿನ ನೆರಿಯ ಗ್ರಾಮದಲ್ಲಿ ನಡೆದಿದೆ. ಸುಮಾ(19) ಮೃತ ವಿದ್ಯಾರ್ಥಿನಿ. ಅನಾರೋಗ್ಯದ ಕಾರಣ ಚಿಕಿತ್ಸೆ ಪಡೆದು ಮನೆಯಲ್ಲಿದ್ದ ಸುಮಾ ಮಂಗಳೂರಿನಲ್ಲಿ ಮೊದಲ ವರ್ಷದ ನರ್ಸಿಂಗ್ ವಿದ್ಯಾಭ್ಯಾಸ ಮಾಡುತಿದ್ದಳು. ಆಗಸ್ಟ್ 9 ರಂದು ಅನಾರೋಗ್ಯದ ಕಾರಣ ಸ್ಥಳೀಯ ಆಸ್ಪತ್ರೆಗೆ ತೆರಳಿ ಚಿಕಿತ್ಸೆ ಪಡೆದು ಮತ್ತೆ ಆ.11 ರಂದು ಅನಾರೋಗ್ಯ ಜಾಸ್ತಿಯಾದ ಕಾರಣ ಮಂಗಳೂರು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದು ಗುಣಮುಖರಾಗಿದ್ರು. ಆದ್ರೆ ಆ.13 ರ ಸಂಜೆ ಮತ್ತೆ ಅಸ್ವಸ್ಥಗೊಂಡಿದ್ದು, ಆಸ್ಪತ್ರೆಗೆ ಸಾಗಿಸುವ ದಾರಿ ಮಧ್ಯೆ ಹೃದಯಾಘಾತದಿಂದ ಮೃತಪಟ್ಟಿದ್ದಾರೆ.

### ಕುರಿ ಮತ್ತು ಮೇಕೆ ಸಾಕಾಣಿಕೆ ತರಬೇತಿ

» ದಾವಣಗೆರೆ

ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ ವತಿಯಿಂದ ನಗರದ ಪಶು ಆಸ್ಪತ್ರೆ ಅವರಣದಲ್ಲಿರುವ ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರದಲ್ಲಿ ಆಗಸ್ಟ್ 17 ಮತ್ತು 18 ರಂದು ಕುರಿ ಮತ್ತು ಮೇಕೆ ಸಾಕಾಣಿಕೆ ತರಬೇತಿಯನ್ನು ಆಯೋಜಿಸಿದೆ. ತರಬೇತಿಗೆ ಹಾಜರಾಗುವ ರೈತರು ಆಧಾರ್ ಕಾರ್ಡ್ ಜೆರಾಕ್ಸ್, 2 ಪಾಸ್‌ಪೋರ್ಟ್ ಸೈಜ್ ಫೋಟೋ ಮತ್ತು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರು ಜಾತಿ ಪ್ರಮಾಣ ಪತ್ರ ಜೆರಾಕ್ಸ್ ತರಬೇಕು. ತರಬೇತಿಯಲ್ಲಿ ಯಾವುದೇ ಪ್ರೋತ್ಸಾಹಧನ ಮತ್ತು ಭತ್ಯೆಗಳನ್ನು ನೀಡಲಾಗುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರ ದಾವಣಗೆರೆ ದೂ. 08192-233787 ಗೆ ಸಂಪರ್ಕಿಸಬಹುದೆಂದು ಮುಖ್ಯ ಪಶು ವೈದ್ಯಾಧಿಕಾರಿಗಳು ತಿಳಿಸಿದ್ದಾರೆ.

### ಕುಡಿಯುವ ನೀರು, ಪರಿಸರ ಸ್ವಚ್ಛತೆಗೆ ಹೆಚ್ಚಿನ ಕಾಳಜಿವಹಿಸಿ: ದಿವ್ಯಪ್ರಭು ಜಿ.ಆರ್.ಜೆ

# ಜೆ.ಜೆ.ಹಟ್ಟಿಯಲ್ಲಿ ಬೀದಿನಾಟಕ ಪ್ರದರ್ಶನ





» ಚಿತ್ರದುರ್ಗ

ಜನರು ಕುಡಿಯುವ ನೀರು ಹಾಗೂ ಪರಿಸರ ಸ್ವಚ್ಛತೆಯ ಬಗ್ಗೆ ಹೆಚ್ಚಿನ ಕಾಳಜಿ ವಹಿಸಬೇಕು, ಈ ಮೂಲಕ ರೋಗ ರುಜಿನ ಹರಡುವುದನ್ನು ತಡೆಗಟ್ಟುವಲ್ಲಿ ಸಹಕರಿಸಬೇಕು ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಮನವಿ ಮಾಡಿದರು.

ನಗರದ ಜೆ.ಜೆ.ಹಟ್ಟಿಯಲ್ಲಿ ಸೋಮವಾರ ಶುದ್ಧ ಕುಡಿಯುವ ನೀರು ಮತ್ತು ವೈಯಕ್ತಿಕ ಸ್ವಚ್ಛತೆ ಹಾಗೂ ಪರಿಸರ ನೈರ್ಮಲ್ಯ ಪಾಲನೆ ಕುರಿತು ಹಮ್ಮಿಕೊಳ್ಳಲಾಗಿರುವ ಬೃಹತ್ ಜನ ಜಾಗೃತಿ ಸಪ್ತಾಹ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಶಾಲಾ-ಕಾಲೇಜು ವಿದ್ಯಾರ್ಥಿಗಳು, ಸಾರ್ವಜನಿಕರು ಶುದ್ಧ ಕುಡಿಯುವ ನೀರು ಮತ್ತು ವೈಯಕ್ತಿಕ ಸ್ವಚ್ಛತೆ ಹಾಗೂ ಪರಿಸರ ನೈರ್ಮಲ್ಯ ಪಾಲನೆ ಕುರಿತು ತಿಳುವಳಿಕೆ ಪಡೆಯುವುದು ಅಗತ್ಯವಾಗಿದೆ ಎಂದರು.

ಶಾಂತಿ ಸಾಗರ ಹಾಗೂ ವಿ.ವಿ. ಸಾಗರದಿಂದ ನಗರಕ್ಕೆ ನೀರು ಸರಬರಾಜಾಗುತ್ತಿದ್ದು, ಹಿರೇಕಂದವಾಡಿ ಬಳಿ ನಿರ್ಮಿಸಲಾಗಿರುವ ಶುದ್ಧೀಕರಣ ಘಟಕದಲ್ಲಿ ನೀರನ್ನು ವಿವಿಧ ಪ್ರಕ್ರಿಯೆಗಳಿಗೆ ಒಳಪಡಿಸಿ ನೀರು ಶುದ್ಧೀಕರಿಸಿದ ಬಳಿಕವೇ ಜನರಿಗೆ ನಳದ ಮೂಲಕ ನೀರು ಪೂರೈಸಲಾಗುವುದು, ಸಾರ್ವಜನಿಕರು ಕುದಿಸಿ, ಆರಿಸಿದ ನೀರನ್ನು ಬಳಸುವ ಅಭ್ಯಾಸ ಮಾಡಿಕೊಳ್ಳಬೇಕು. ಈ ರೀತಿ ಮಾಡುವುದರಿಂದ ಒಂದು ವೇಳೆ ನೀರಿನಲ್ಲಿ ಇರುವ ಬ್ಯಾಕ್ಟೀರಿಯಾ, ವೈರಸ್‌ಗಳು ನಾಶವಾಗಿ, ನೀರು ಶುದ್ಧವಾಗುತ್ತದೆ. ಇದರಿಂದ ಯಾವುದೇ ರೋಗಗಳು ಹರಡುವುದಿಲ್ಲ. ಹಾಗಾಗಿ ಶುದ್ಧ ಕುಡಿಯುವ ನೀರನ್ನೇ ಸೇವಿಸಬೇಕು ಎಂದು ಹೇಳಿದರು.

ಶಾಲಾ-ಕಾಲೇಜು ವಿದ್ಯಾರ್ಥಿಗಳು, ನರ್ಸಿಂಗ್ ವಿದ್ಯಾರ್ಥಿಗಳು, ಆಶಾ ಕಾರ್ಯಕರ್ತೆಯರು, ಅಂಗನವಾಡಿ ಕಾರ್ಯಕರ್ತೆಯರು, ಆರೋಗ್ಯ ಇಲಾಖೆ, ನಗರಸಭೆ ಸಿಬ್ಬಂದಿ ಹಾಗೂ ಕಲಾ ತಂಡಗಳಿಂದ ಬೀದಿ ನಾಟಕ ಪ್ರದರ್ಶನ, ಜಾಗೃತಿ ಸಂದೇಶಗಳ ಭಿತ್ತಿಪತ್ರಗಳ ಪ್ರದರ್ಶನ, ಜಾಗೃತಿ ಘೋಷಣೆಗಳು, ಎಲ್‌ಇಡಿ ವಾಹನದಲ್ಲಿ ವಿಡಿಯೋ ಚಿತ್ರ ಪ್ರದರ್ಶನದ ಮೂಲಕ ಜಾಗೃತಿ ಮೂಡಿಸಲಾಗುತ್ತದೆ. ಜೆ.ಜೆ.ಹಟ್ಟಿ ವಾರ್ಡ್‌ನಲ್ಲಿರುವ ಎಲ್ಲ ಸಾರ್ವಜನಿಕರು ತಿಳುವಳಿಕೆ ಪಡೆದು ಮುಂದಿನ ದಿನಗಳಲ್ಲಿ ಯಾವುದೇ ಅಹಿತಕರ ಘಟನೆಗಳು ಜರುಗದಂತೆ ಅಗತ್ಯ ಸಹಕಾರ ನೀಡಬೇಕು ಎಂದು ಮನವಿ ಮಾಡಿದರು.

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸೋಮಶೇಖರ್ ಮಾತನಾಡಿ, ಇತ್ತೀಚೆಗೆ ಕವಾಡಿಗರಹಟ್ಟಿಯಲ್ಲಿ ಕಲುಷಿತ ನೀರಿನಿಂದ ಸಂಭವಿಸಿದ ಅಹಿತಕರ ಘಟನೆ ಜಿಲ್ಲೆಯಲ್ಲಿ ಯಾವುದೇ ಪ್ರದೇಶದಲ್ಲಿ ಮರುಕಳಿಸಬಾರದು ಎಂಬ ಉದ್ದೇಶದಿಂದ ಪರಿಸರ ನೈರ್ಮಲ್ಯ, ಶುದ್ಧ ಕುಡಿಯುವ ನೀರು ಹಾಗೂ ಸ್ವಚ್ಛತೆ ಕಾಪಾಡಿಕೊಳ್ಳುವ ಕುರಿತು ಅರಿವು ಮೂಡಿಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಇದು ಕೇವಲ ಚಿತ್ರದುರ್ಗ ನಗರಕ್ಕೆ ಸೀಮಿತವಾಗಿಲ್ಲ. ಜಿಲ್ಲೆಯ ಗ್ರಾಮಾಂತರ ಪ್ರದೇಶಗಳಲ್ಲಿಯೂ ಜನಜಾಗೃತಿ ಜಾಥಾವನ್ನೂ ಮುಂದುವರೆಸಲಾಗುವುದು. ನೈರ್ಮಲ್ಯತೆ ಹಾಗೂ ವೈಯಕ್ತಿಕ ಸ್ವಚ್ಛತೆ ಕುರಿತು ಪ್ರತಿಯೊಬ್ಬರು ಕಾಳಜಿವಹಿಸಬೇಕು ಎಂದು ಹೇಳಿದರು.

ಪ್ರತಿಯೊಬ್ಬರು ತಮ್ಮ ಜವಾಬ್ದಾರಿ ಅರಿವು ಕಾರ್ಯನಿರ್ವಹಿಸಬೇಕು. ಹಾಗಾಗಿ ತಾವುಗಳು ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿಯೊಂದಿಗೆ ಎಲ್ಲರೂ ಒಟ್ಟಿಗೆ ಕೈಜೋಡಿಸಬೇಕು. ಮುಂದಿನ ದಿನಗಳಲ್ಲಿ ಯಾವುದೇ ಸಾವು-ನೋವುಗಳು ಆಗದಂತೆ ನಾವೆಲ್ಲರೂ ಒಟ್ಟಾಗಿ ಶ್ರಮಿಸೋಣ ಎಂದು ಹೇಳಿದರು. ಬೀದಿ ನಾಟಕ ಕಲಾತಂಡದವರು ಕುಡಿಯುವ ನೀರಿನ ಬಳಕೆ ಹಾಗೂ ಶೌಚಾಲಯ ಬಳಕೆ ಕುರಿತಂತೆ ಬೀದಿನಾಟಕ ಹಾಗೂ ಹಾಡುಗಳ ಮೂಲಕ ಇಲ್ಲಿನ ಜನರಲ್ಲಿ ಜಾಗೃತಿ ಮೂಡಿಸಿದರು. ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಉಪವಿಭಾಗಾಧಿಕಾರಿ ಎಂ.ಕಾರ್ತಿಕ್, ತಹಶೀಲ್ದಾರ ಡಾ.ನಾಗವೇಣಿ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಕೆ.ರವಿಶಂಕರ್ ರೆಡ್ಡಿ, ಬಿಇಓ ನಾಗಭೂಷಣ್ ಸೇರಿದಂತೆ ಮತ್ತಿತರರು ಇದ್ದರು.

# 18 ಮಂದಿಗೆ ಪೊಲೀಸರಿಗೆ ರಾಷ್ಟ್ರಪತಿ ಪದಕ



» ಬೆಂಗಳೂರು

77ನೇ ವರ್ಷದ ಸ್ವಾತಂತ್ರ್ಯ ದಿನಾಚರಣೆ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರ ನೀಡುವ ರಾಷ್ಟ್ರಪತಿಗಳ ಪದಕಕ್ಕೆ ರಾಜ್ಯದ ಹೆಚ್ಚುವರಿ ಪೊಲೀಸ್ ಮಹಾ ನಿರ್ದೇಶಕ (ಎಡಿಜಿಪಿ) ಸೀಮಾಂತ್ ಕುಮಾರ್ ಸಿಂಗ್, ಮುರುಗನ್ ಐಜಿಪಿ ಸಂದೀಪ್ ಪಾಟೀಲ್ ಸೇರಿ 18 ಮಂದಿ ಪೊಲೀಸ್ ಅಧಿಕಾರಿಗಳು ಸಿಬ್ಬಂದಿ ಭಾಜನರಾಗಿದ್ದಾರೆ.

**ವಿಶಿಷ್ಟ ಸೇವಾ ಪದಕ:** ಸೀಮಾಂತ್ ಕುಮಾರ್ ಸಿಂಗ್ ಎಡಿಜಿಪಿ ಕೆಎಸ್‌ಆರ್‌ಪಿ ಮುರುಗನ್ ಎಡಿಜಿಪಿ ಸಿಎಲ್ ಆಂಡ್ ಎಂ

**ಶ್ಲಾಘನೀಯ ಸೇವಾ ಪದಕ :** ಸಂದೀಪ್ ಪಾಟೀಲ್, ಐಜಿಪಿ ಕೆಎಸ್‌ಆರ್‌ಪಿ ಬಿ. ಎಸ್. ಮೋಹನ್ ಕುಮಾರ್, ಡಿವೈಎಸ್‌ಪಿ ನಾಗರಾಜ್, ಎಸಿಪಿ ಶಿವಶಂಕರ್, ಅಸಿಸ್ಟೆಂಟ್ ಡೈರೆಕ್ಟರ್ ಭೀಮಾರಾವ್ ಗಿರೀಶ್, ಎಸ್ಪಿ ರಾಘವೇಂದ್ರ ಹೆಗ್ಡೆ, ಎಸ್‌ಪಿ ಜಗದೀಶ್ ಹೆಚ್.ಎಸ್, ಎಸಿಪಿ ಕೇಶವಮೂರ್ತಿ ಗೋಪಾಲಯ್ಯ, ಡಿಎಸ್‌ಪಿ ನಾಗಯ್ಯ ನಾಗರಾಜು, ಡಿಎಸ್‌ಪಿ ಬಿ.ಎನ್ ಶ್ರೀನಿವಾಸ್, ಡಿಎಸ್‌ಪಿ ಅಂಜುಮಾಲ ನಾಯ್ಕ್, ಡಿವೈಎಸ್‌ಪಿ ಅನಿಲ್ ಕುಮಾರ್ ಪ್ರಭಾಕರ್, ಪಿಐ ಅಶೋಕ್ ಆರ್.ಪಿ, ಪಿಐ ರಾಮಪ್ಪ ಗುತ್ತೇರ್, ಪಿಐ ಶಂಕರ, ಹೆಚ್‌ಸಿ ಕೆ.ವೆಂಕಟೇಶ್, ಹೆಚ್‌ಸಿ ಕುಮಾರ್, ಎಹೆಚ್‌ಸಿ ವಿ.ಬಂಗಾರು, ಕೆಎಸ್‌ಆರ್‌ಪಿ.

## ಮತ್ಸ್ಯ ಸಂಪದ ಯೋಜನೆ: ವಿವಿಧ ಘಟಕಗಳಿಗೆ ಅರ್ಜಿ


» ಚಿತ್ರದುರ್ಗ

ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಮತ್ಸ್ಯ ಸಂಪದ ಯೋಜನೆಯಡಿ 2023-24ನೇ ಸಾಲಿಗೆ ವಿವಿಧ ಘಟಕಗಳಡಿ ಗುರಿಗಳನ್ನು ನೀಡಲಾಗಿದ್ದು, ಸಾಮಾನ್ಯ ವರ್ಗಕ್ಕೆ ಶೇ.40, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಮಹಿಳೆಯರಿಗೆ ಶೇ.60 ಸಹಾಯಧನ ನೀಡಲಾಗುವುದು.

ಆಸಕ್ತ ಫಲಾನುಭವಿಗಳು ತಮಗೆ ಸಂಬಂಧಿಸಿದ ತಾಲ್ಲೂಕಿನ ಮೀನುಗಾರಿಕೆ ಸಹಾಯಕ ನಿರ್ದೇಶಕರ ಕಚೇರಿಗೆ ಇದೇ ಆಗಸ್ಟ್ 31ರ ಒಳಗಾಗಿ ಅರ್ಜಿ ಸಲ್ಲಿಸಬೇಕು. ನಂತರ ಬರುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.ಯೋಜನೆ ವಿವರ : ಮೀನು ಕೃಷಿಕೊಳ ನಿರ್ಮಾಣಕ್ಕೆ ಸಹಾಯ 20 ಹೆ. ಭೌತಿಕ ಗುರಿ ನಿಗಧಿಪಡಿಸಲಾಗಿದ್ದು, 10 ಸಮಾನ್ಯ, 6 ಮಹಿಳೆ ವರ್ಗ, 3 ಪರಿಶಿಷ್ಟ ಜಾತಿಗೆ ಹಾಗೂ 1 ಪರಿಶಿಷ್ಟ ಪಂಗಡಕ್ಕೆ ಮೀಸಲಿದೆ. ಮೀನು ಕೃಷಿಕೊಳದ ಹೂಡಿಕೆ ವೆಚ್ಚಕ್ಕೆ ಸಹಾಯ 20 ಹೆ. ಭೌತಿಕ ಗುರಿ ನಿಗಧಿಪಡಿಸಲಾಗಿದ್ದು, 10 ಸಮಾನ್ಯ, 6 ಮಹಿಳೆಗೆ, 3 ಪರಿಶಿಷ್ಟ ಜಾತಿಗೆ, 1 ಪರಿಶಿಷ್ಟ ಪಂಗಡಕ್ಕೆ ಮೀಸಲಿದೆ. ಬಯೋಫ್ಲಾಕ್ ಕೊಳ ಘಟಕ ನಿರ್ಮಾಣ ಹೂಡಿಕೆ ವೆಚ್ಚ ಸೇರಿ 1 ಭೌತಿಕ ಗುರಿ ನಿಗಧಿಪಡಿಸಲಾಗಿದ್ದು, 1 ಮಹಿಳೆಗೆ ಮೀಸಲಿದೆ. ಎಫ್‌ಆರ್‌ಪಿ ದೋಣಿ ಮತ್ತು ಬಲೆ ಖರೀದಿಗೆ ಸಹಾಯ 1 ಭೌತಿಕ ಗುರಿ, 1 ಪರಿಶಿಷ್ಟ ಪಂಗಡಕ್ಕೆ ಮೀಸಲಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕಚೇರಿ ಹಾಗೂ ಸಂಬಂಧಿಸಿದ ತಾಲ್ಲೂಕಿನ ಮೀನುಗಾರಿಕೆ ಸಹಾಯಕ ನಿರ್ದೇಶಕರ ದೂರವಾಣಿ ಸಂಖ್ಯೆ ಚಿತ್ರದುರ್ಗ 7353442282, ಹಿರಿಯೂರು 9972010433, ಹೊಸದುರ್ಗ ಮತ್ತು ಹೊಳಲ್ಕೆರೆ 7022933310, ಚಳ್ಳಕೆರೆ ಮತ್ತು ಮೊಳಕಾಲ್ಮುರು 9342187356 ಗೆ ಸಂಪರ್ಕಿಸಬಹುದು ಎಂದು ಮೀನುಗಾರಿಕೆ ಇಲಾಖೆ ಉಪ ನಿರ್ದೇಶಕರು ತಿಳಿಸಿದ್ದಾರೆ.

# 16ರಿಂದ ಮಾಚಿದೇವ ಶ್ರೀ ಮನ-ಮನೆ ಕಾರ್ಯಕ್ರಮ

» ಚಳ್ಳಕೆರೆ



ಕರ್ನಾಟಕ ರಾಜ್ಯದ ಮಡಿವಾಳ ಸಮುದಾಯದ ಆರಾಧ್ಯ ದೈವವಾದ ಜಗದ್ಗುರು ಶ್ರೀಮಾಚಿದೇವ ಮಹಾಸಂಸ್ಥಾನ ಮಠದ ಮಡಿವಾಳ ಡಾ.ಬಸವ ಮಾಚಿದೇವ ಮಹಾಸ್ವಾಮಿಯವರ ಚಾರ್ತುಮಾಸದ ಪೂಜಾ ವಿಧಿವಿಧಾನಗಳನ್ನು ಆಗಸ್ಟ್ 16ರಿಂದ ಸೆ.15ರ ತನಕ ಒಂದು ತಿಂಗಳ ಕಾಲ ರಾಜ್ಯದ 30 ತಾಲ್ಲೂಕುಗಳಲ್ಲಿ ತೆರಳಿ ಧರ್ಮ ಜಾಗೃತಿ, ಸಮಾಜ ಸಂಘಟನೆ ಕಾರ್ಯದಲ್ಲಿ ಪಾಲ್ಗೊಳ್ಳುವರು.

ಈ ಬಗ್ಗೆ ಮಾಹಿತಿ ನೀಡಿದ ತಾಲ್ಲೂಕು ಮಡಿವಾಳ ಸಮಾಜದ ಅಧ್ಯಕ್ಷ ಎನ್.ಮಂಜುನಾಥ ಆಗಸ್ಟ್ 16ರ ಬುಧವಾರ ಬೆಳಗ್ಗೆ 10ಕ್ಕೆ ನಗರದ ಛೇಂಬರ್ ಆಫ್ ಕಾರ್ಮಸ್ ಸಭಾಂಗಣದಲ್ಲಿ ಗುರುಗಳ ಮನ-ಮನೆ ಶ್ರಾವಣ ಮಾಸ ಕಾರ್ಯಕ್ರಮದ ಆರಂಭವಾಗಲಿದ್ದು, ಜಿಲ್ಲಾ ಉಸ್ತುವಾರಿ, ರಾಜ್ಯ ಯೋಜನಾ ಮತ್ತು ಸಾಂಖ್ಯಿಕ ಸಚಿವ ಡಿ.ಸುಧಾಕರ್ ಕಾರ್ಯಕ್ರಮವನ್ನು ಉದ್ಘಾಟಿಸುವರು. ಕಾರ್ಯಕ್ರಮ ಅಧ್ಯಕ್ಷತೆಯನ್ನು ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ವಹಿಸಲಿದ್ದು, ಮುಖ್ಯ ಅತಿಥಿಯಾಗಿ ಚಿತ್ರದುರ್ಗ ಶಾಸಕ ಕೆ.ಸಿ.ವೀರೇಂದ್ರ ಭಾಗವಹಿಸುವರು.

ಶ್ರಾವಣ ಮಾಸದ ಮನ-ಮನೆ ಭೇಟಿ ಕಾರ್ಯಕ್ರಮದ ಬಗ್ಗೆ ಪತ್ರಿಕೆಯೊಂದಿಗೆ ಮಾತನಾಡಿದ ಡಾ.ಬಸವ ಮಾಚಿದೇವ ಮಹಾಸ್ವಾಮಿಯವರು ಸಮಾಜದ ಪ್ರತಿಯೊಬ್ಬ ವ್ಯಕ್ತಿಯ ಬದುಕು ಧಾರ್ಮಿಕ ವಿಚಾರಗಳ ಮೇಲೆ ನಡೆಯುತ್ತಾ ಬಂದಿದೆ. ನಮ್ಮಲ್ಲಿನ ಸಂಸ್ಕೃತಿ, ಸಂಸ್ಕಾರ, ಧಾರ್ಮಿಕ ಭಕ್ತಿ ಶ್ರದ್ಧೆಗಳು ಎಲ್ಲರಿಗೂ ಮಾದರಿಯಾಗಿವೆ. ಪ್ರತಿಯೊಬ್ಬ ವ್ಯಕ್ತಿಯೂ ದೇಶ ಪ್ರೇಮದ ಜತೆಗೆ ದೈವ ಭಕ್ತಿಯನ್ನು ಸಹ ರೂಡಿಸಿಕೊಳ್ಳಬೇಕು. ಶ್ರಾವಣ ಮಾಸದ ಮನ-ಮನೆ ಕಾರ್ಯಕ್ರಮ ಸಮುದಾಯಕ್ಕೆ ಸೀಮಿತವಲ್ಲ, ಸಮಾಜದ ಎಲ್ಲಾ ವರ್ಗದಲ್ಲೂ ಧಾರ್ಮಿಕ ಜಾಗೃತಿ ಮೂಡಿಸುವ ಕಾರ್ಯಕ್ರಮವಾಗಿದೆ ಎಂದರು. ಆಗಸ್ಟ್ 16 ಬುಧವಾರದಂದು ಉದ್ಘಾಟನೆಗೊಂಡು ಸುಮಾರು 30 ತಾಲ್ಲೂಕು ಕೇಂದ್ರಗಳಲ್ಲಿ 30 ದಿನಗಳ ಕಲಾ ಮನ ಮನೆ ಮಾಚಿದೇವ ಕಾರ್ಯಕ್ರಮ ನಡೆಯುವುದು. ಈ ಮೂಲಕ ಮಡಿವಾಳ ಸಮಾಜವನ್ನು ಒಗ್ಗೂಡಿಸುವ ಕಾರ್ಯಕ್ಕೆ ಸ್ವಾಮೀಜಿ ಮುನ್ನುಡಿ ಬರೆಯುವರು ಎಂದರು.

## ಆ.15ರಂದು ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಜನ್ಮದಿನ

» ಚಿತ್ರದುರ್ಗ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ಸಂಯುಕ್ತಾಶ್ರಯದಲ್ಲಿ ಇದೇ ಆಗಸ್ಟ್ 15ರಂದು ಬೆಳಿಗ್ಗೆ 8ಕ್ಕೆ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಜನ್ಮದಿನ ಆಚರಣೆ ಕಾರ್ಯಕ್ರಮ ಆಯೋಜಿಸಲಾಗಿದೆ. ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಅವರು ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸುವರು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಎಸ್.ಕೆ.ಮಲ್ಲಿಕಾರ್ಜುನ್ ತಿಳಿಸಿದ್ದಾರೆ.

## ಪ್ರಮುಖ ಸುದ್ದಿ

# ವರುಣನ ಆರ್ಭಟಕ್ಕೆ ಭೂ ಕುಸಿತ 21ಜನ ಸಾವು

» ನವದೆಹಲಿ



ಹಿಮಾಚಲ ಪ್ರದೇಶದಲ್ಲಿ ವರುಣ ಆರ್ಭಟಕ್ಕೆ ಶಿವನ ದೇವಾಲಯ ಬಳಿ ಭೂಕುಸಿತ ಹಾಗೂ ಮೇಘಸ್ಫೋಟಕ್ಕೆ ಒಟ್ಟು 21 ಮಂದಿ ಸಾವನ್ನಪ್ಪಿದ್ದಾರೆ. ಕಳೆದ 24 ತಾಸುಗಳಲ್ಲಿ ಸುರಿದು ಭಾರೀ ಮಳೆಯಿಂದಾಗಿ ಶಿಮ್ಲಾ ನಗರದಲ್ಲಿ ಶಿವನ ದೇವಾಲಯ ಕುಸಿದು ಬಿದ್ದಿದೆ. ಅವಶೇಷಗಳ ಅಡಿಯಲ್ಲಿ ಇನ್ನಷ್ಟು ಮಂದಿ ಸಿಲುಕಿರುವ ಶಂಕೆಯಿದ್ದು ಪರಿಹಾರ ಕಾರ್ಯ ಚುರುಕುಗೊಳಿಸಲಾಗಿದೆ.

ಹಿಮಾಚಲ ಪ್ರದೇಶದಲ್ಲಿ ಸಂಭವಿಸಿದ 2 ಪ್ರತ್ಯೇಕ ಪ್ರಕರಣಗಳಲ್ಲಿ 21 ಮಂದಿ ಮೃತಪಟ್ಟಿರುವುದನ್ನು ಮುಖ್ಯಮಂತ್ರಿ ಸುಖವಿಂದರ್ ಸಿಂಗ್ ಸುಖು ತಿಳಿಸಿದ್ದಾರೆ. ರಾಜ್ಯದಾದ್ಯಂತ ಧಾರಾಕಾರ ಮಳೆಸುರಿಯುತ್ತಿದ್ದು, ಜನರು ಹೊರಗೆ ಬರದಂತೆಮನವಿಮಾಡಿದ್ದಾರೆ.ಪ್ರವಾಸಿಗರು ಭೂಕುಸಿತದಿಂದ ಹಾನಿಯಾಗಿರುವ ಪ್ರದೇಶಗಳಿಗೆ ಭೇಟಿ ನೀಡಬಾರದು ಎಂದು ಮನವಿ ಮಾಡಿದ್ದಾರೆ.

ಶಿಮ್ಲಾ ನಗರದ ಸಮ್ಮರ್ ಹಿಲ್ ಪ್ರದೇಶದ ಶಿವನ ದೇವಾಲಯದ ಬಳಿ ಭೂಕುಸಿತ ಸಂಭವಿಸಿ 9 ಮಂದಿ ಮೃತಪಟ್ಟಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಘಟನಾಸ್ಥಳಕ್ಕೆ ಪರಿಹಾರ ತಂಡಗಳು ಭೇಟಿ ನೀಡಿ ಅವಶೇಷಗಳಡಿಯಲ್ಲಿ ಸಿಕ್ಕಿಹಾಕಿಕೊಂಡವರನ್ನು ರಕ್ಷಿಸುವ ಕಾರ್ಯ ಭರದಿಂದ ಸಾಗಿದೆ. ಆದರೆ ಪರಿಹಾರ ಕಾರ್ಯಾಚರಣೆಗೆ ಮಳೆ ಅಡ್ಡಿಯಾಗಿದೆ.

ಎರಡು ಪ್ರತ್ಯೇಕ ಪ್ರಕರಣಗಳಲ್ಲಿ ಸಂಭವಿಸಿರುವ ಭೂಕುಸಿತದಲ್ಲಿ 15ರಿಂದ 20 ಮಂದಿ ಸಾವನ್ನಪ್ಪಿರುವ ಸಂಖ್ಯೆಯಿದೆ ಎಂದು ಶಿಮ್ಲಾ ನಗರದ ಆಯುಕ್ತ ಆದಿತ್ಯನೇಗಿ ತಿಳಿಸಿದ್ದಾರೆ.

ಫಾಗ್ಲಿ ಪ್ರದೇಶದಲ್ಲಿ ಮತ್ತೊಂದು ಭೂಕುಸಿತ ಸಂಭವಿಸಿದ್ದು ಈ ಪ್ರದೇಶಗಳಲ್ಲಿ ಹಲವಾರು ಮನೆಗಳು ಕುಸಿದು ಬಿದ್ದಿವೆ. ಸೋಲ್ಲನ್ ಪ್ರದೇಶದ ಕಾಂಡಾ ಘಾಟ್ ಉಪವಲಯದ ಮಾಮ್ ಲೀಗ್ ಗ್ರಾಮದಲ್ಲಿ 6 ಮಂದಿಯನ್ನು ರಕ್ಷಿಸಲಾಗಿದೆ. ಒಟ್ಟಾರೆ ಕಳೆದ 48 ಗಂಟೆಗಳ ಅವಧಿಯಲ್ಲಿ ಮಳೆ ಸಂಭವಿಸಿದ ದುರಂತಗಳಲ್ಲಿ 21 ಮಂದಿ ಸಾವನ್ನಪ್ಪಿದ್ದಾರೆ.

**ಭೂಕುಸಿತದಿಂದ 7 ಮಂದಿ ಸಾವು:** ಮೇಘ ಸ್ಫೋಟದ ಹಿನ್ನೆಲೆಯಲ್ಲಿ ಸುರಿದ ಭಾರಿ ಮಳೆಯಿಂದ ಸೋಲನ್ ಪ್ರದೇಶದಲ್ಲಿ, ಒಂದೇ ಕುಟುಂಬದ ಏಳು ವ್ಯಕ್ತಿಗಳು ಸಾವನ್ನಪ್ಪಿದ್ದಾರೆ.ತಡರಾತ್ರಿಮೇಘಸ್ಫೋಟದ ನಂತರ ಸೋಲನ್‌ನಲ್ಲಿ ಎರಡು ಮನೆಗಳು ಕೊಚ್ಚಿಹೋಗಿವೆ. ಆರು ಮಂದಿಯನ್ನು ರಕ್ಷಣಾ ಪಡೆ ರಕ್ಷಿಸುವಲ್ಲಿ ಯಶಸ್ವಿತಾಗಿದೆ. ಇನ್ನುಳಿದಂತೆ ಜಾಡೋನ್ ಗ್ರಾಮದಲ್ಲಿ ಏಳು ಮಂದಿ ಸಾವನ್ನಪ್ಪಿದ್ದಾರೆ ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ ಮೃತಪಟ್ಟವರನ್ನು ಹರ್ನಾಮ್ (38), ಕಮಲ್ ಕಿಶೋರ್ (35), ಹೇಮಲತಾ (34), ರಾಹುಲ್ (14), ನೇಹಾ (12), ಗೋಲು (8) ಮತ್ತು ರಕ್ಷಾ (12), ಸೋಲನ್, ಪೊಲೀಸ್ ನಿರ್ದೇಶಕ ಗೌರವ್ ಸಿಂಗ್ ಎಂದು ಗುರುತಿಸಲಾಗಿದೆ ಎಂದು ಶಿಮ್ಲಾದ ಜಿಲ್ಲಾಧಿಕಾರಿ ಆದಿತ್ಯ ನೇಗಿ ತಿಳಿಸಿದ್ದಾರೆ. ರಾಜ್ಯ ತುರ್ತು ಕಾರ್ಯಾಚರಣೆ ಕೇಂದ್ರದ ಪ್ರಕಾರ, ದುರಂತದ ಕಾರಣದಿಂದಾಗಿ ರಾಜ್ಯದಲ್ಲಿ 752 ರಸ್ತೆಗಳನ್ನು ಮುಚ್ಚಲಾಗಿದೆ. ಸೋಮವಾರ ರಾಜ್ಯದ ಎಲ್ಲಾ ಶಾಲೆಗಳು ಮತ್ತು ವಿಶ್ವವಿದ್ಯಾಲಯಗಳಿಗೆ ರಜೆ ನೀಡಲಾಗಿದೆ ಎಂದು ಹೇಳಿದ್ದಾರೆ.

ಈ ನಡುವೆ ಹಿಮಾಚಲ ಪ್ರದೇಶ ಮತ್ತು ಉತ್ತರಖಾಂಡದಲ್ಲಿ ಬಾರಿ ಮಳೆಯಾಗುತ್ತಿರುವ ಹಿನ್ನೆಲೆಯಲ್ಲಿ ಉತ್ತರಾಖಂಡದಲ್ಲಿ ಚಾರ್ ಧಾಮ್ ಯಾತ್ರೆಯನ್ನು ಎರಡು ದಿನಗಳ ಕಾಲ ಮುಂದೂಡಲಾಗಿದೆ.

# ಅಶ್ವತ್ಥ್ ಅಲ್ಲ ನವರಂಗಿ ನಾರಾಯಣ

» ಬೆಂಗಳೂರು

ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಬೆಂಗಳೂರು ಅಭಿವೃದ್ಧಿ ಸಚಿವರಲ್ಲ. ಬೆಂಗಳೂರು ನಿರ್ನಾಮ ಸಚಿವರು ಎಂದು ಟೀಕೆ ಮಾಡಿದ್ದ ಮಾಜಿ ಸಚಿವ ಅಶ್ವತ್ಥ್‌ನಾರಾಯಣ ವಿರುದ್ಧ ಕಿಡಿಕಾರಿರುವ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್,ಇವರು ಅಶ್ವತ್ಥ್‌ನಾರಾಯಣ ಅಲ್ಲ ನವರಂಗಿ ನಾರಾಯಣ ಎಂದು ಟೀಕಿಸಿದ್ದಾರೆ.



ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಾಜಿ ಸಚಿವ ಅಶ್ವತ್ಥ್‌ನಾರಾಯಣ ಅವರ ಟೀಕೆಯನ್ನು ಗಮನಿಸಿದ್ದೇನೆ. ನವರಂಗಿ ನಾರಾಯಣ ಕಳ್ಳರನ್ನು ರಕ್ಷಣೆ ಮಾಡುವಲ್ಲಿ ಡಾಕ್ಟರೇಟ್ ಮಾಡಿದ್ದಾರೆ ಎಂದು ವಾಗ್ದಾಳಿ ನಡೆಸಿದರು.

ಮಾಜಿ ಸಚಿವರಾದ ಅಶ್ವತ್ಥ್‌ನಾರಾಯಣ ಅವರಿಗೆ ಪ್ರಾಮಾಣಿಕ ಗುತ್ತಿಗೆದಾರರ ರಕ್ಷಣೆ ಬಗ್ಗೆ ಚಿಂತೆ ಇಲ್ಲ. ನಕಲಿ ಗುತ್ತಿಗೆದಾರರು ಮತ್ತು ಬೇನಾಮಿ ಕಳ್ಳರ ರಕ್ಷಣೆಗೆ ನಿಂತಿದ್ದಾರೆ ಎಂದು ಟೀಕಿಸಿದರು.

ಅಶ್ವತ್ಥ್‌ನಾರಾಯಣ ಕೃಪಾಪೋಷಿತ ನಾಟಕಮಂಡಳಿ ಆಟ ಜಾಸ್ತಿ ದಿನ ನಡೆಯಲ್ಲ. ಅವರು ಎಲ್ಲಿಗೆ ಬೇಕಾದರೂ ಹೋಗಲಿ, ಏನು ಬೇಕಾದರೂ ಮಾಡಲಿ ಸದ್ಯದಲ್ಲೇ ದಾಖಲೆ ಸಮೇತ ಅಶ್ವತ್ಥ್‌ನಾರಾಯಣ ಅವರ ಬಣ್ಣ ಬಯಲು ಮಾಡುತ್ತೇನೆ ಎಂದು ಡಿ.ಕೆ. ಶಿವಕುಮಾರ್ ಹೇಳಿದರು. ರಾಮನಗರ ಸ್ವಚ್ಛ ಮಾಡುತ್ತೇನೆ ಎಂದು ಬಂದವರು ಅವರ ಪಕ್ಷವನ್ನೇ ಕ್ಲೀನ್ ಮಾಡಿದರು. ಆ ಮಾನಸಿಕ ಕಿನ್ನತೆಯಲ್ಲಿ ಅಶ್ವತ್ಥ್‌ನಾರಾಯಣ ಅವರು ಇದ್ದಾರೆ. ಅವರು ಸಚಿವರಾಗಿದ್ದಾಗ ಏನೆಲ್ಲಾ ಮಾಡಿದ್ದಾರೆ ಎಂಬ ವಿಚಾರವನ್ನು ಬಿಚ್ಚಿಟ್ಟಿಲ್ಲ. ಸಮಯ ಬಂದಾಗ ಅವರೆಲ್ಲಾ ಅಕ್ರಮಗಳನ್ನು ಬಿಚ್ಚಿಡುತ್ತೇವೆ ಎಂದರು

ಕಾಮಗಾರಿಗಳ ಬಗ್ಗೆ ತನಿಖೆ ವರದಿ ಬಂದರೆ ಯಾರು ಎಷ್ಟು ಕೆಲಸ ಮಾಡಿದ್ದಾರೆ, ಹೇಗೆ ಮಾಡಿದ್ದಾರೆ, ಯಾರು ಯಾರನ್ನು ಹೇಗೆ ಎತ್ತಿ ಕಟ್ಟುತ್ತಿದ್ದಾರೆ ಎಂಬುದು ಬಯಲಾಗಲಿದೆ. ಪ್ರಾಮಾಣಿಕ ಗುತ್ತಿಗೆದಾರರ ರಕ್ಷಣೆಯನ್ನು ಸರ್ಕಾರ ಮಾಡುತ್ತಿದೆ. ಅದನ್ನು ತಪ್ಪಿಸಲು ಬಿಜೆಪಿಯವರು ಇಷ್ಟೆಲ್ಲಾ ಆಟವಾಡುತ್ತಿದ್ದಾರೆ. ರಾಜ್ಯಪಾಲರ ಬಳಿಗೆ ಮಾತ್ರವಲ್ಲ ರಾಷ್ಟ್ರಪತಿಗಳ ಬಳಿಗೂ ಹೋಗಲಿ, ಯಾವುದೇ ಅಭಿಯಾನ ಮಾಡಲಿ ನಾವಂತೂ ತನಿಖೆ ಮಾಡಿ ಪ್ರಾಮಾಣಿಕ ಗುತ್ತಿಗೆದಾರರ ಪರ ನಿಲುತ್ತೇವೆ ಎಂದರು.

ಗುತ್ತಿಗೆದಾರರು ಕೆಲ ಒತ್ತಡದಿಂದ ನನ್ನ ವಿರುದ್ಧ ಮಾತನಾಡುತ್ತಿದ್ದಾರೆ ಎಂಬುದು ಗೊತ್ತಿದೆ. ನಾನು ಯಾರಿಗೂ ಗುತ್ತಿಗೆಯನ್ನೇ ಕೊಟ್ಟಿಲ್ಲ. ಕಮಿಷನ್ ಕೇಳಲು ಹೇಗೆ ಸಾಧ್ಯ. ನನ್ನ ಬಗ್ಗೆ ಆರೋಪ ಮಾಡುವ ಬಿಜೆಪಿಯವರು ಅವರ ಅವಧಿಯಲ್ಲಿ ಏಕೆ ಬಿಲ್ ಪಾವತಿ ಮಾಡಲಿಲ್ಲ. ಸ್ವಾತಂತ್ರ್ಯ ದಿನ ಮುಗಿಯಲಿ ನಂತರ ಬಿಜೆಪಿ ಅವಧಿಯ ಕಾಮಗಾರಿಗಳ ಆಘಾತಕಾರಿ ದಾಖಲೆಗಳನ್ನು ಬಿಡುಗಡೆ ಮಾಡುತ್ತೇನೆ ಎಂದು ಡಿ.ಕೆ. ಶಿವಕುಮಾರ್ ಹೇಳಿದರು.

ಡಿ.ಕೆ. ಶಿವಕುಮಾರ್ ಪ್ರಾಮಾಣಿಕರಾಗಿದ್ದರೆ ಅಜ್ಜಯ್ಯನ ಮಠದಲ್ಲಿ ಪ್ರಮಾಣ ಮಾಡಲಿ ಎಂಬ ಸಿ.ಟಿ. ರವಿ ಹೇಳಿಕೆಗೆ ಪ್ರತಿಕ್ರಿಯಿಸಿದ ಅವರು, ಸಿ.ಟಿ. ರವಿಗೆ ಬುದ್ಧಿ ಭ್ರಮಣೆಯಾಗಿದೆ. ಚಿಕಿತ್ಸೆ ಅಗತ್ಯವಿದೆ. ಅವರಿಗೆ ಉತ್ತಮ ಚಿಕಿತ್ಸೆ ಕೊಡಿಸೋಣ ಎಂದರು.

## ಫಾಸ್ಟ್ ನ್ಯೂಸ್

### ಆಸ್ತಿ ಮಾರಿ ಬಂದ ಹಣದ ವಿಚಾರಕ್ಕೆ ಗಲಾಟೆ, ತಂದೆ ಹಾಗೂ ಮಧ್ಯವರ್ತಿಯನ್ನು ಕೊಂದ ಮಗ

ಚಿಕ್ಕಮಗಳೂರು ಜಿಲ್ಲೆ ಮೂಡಿಗೆರೆ ತಾಲೂಕಿನ ಮಧುಗುಂಡಿ ಗ್ರಾಮದಲ್ಲಿ ಆಸ್ತಿ ಮಾರಿ ಬಂದ ಹಣದ ವಿಚಾರಕ್ಕೆ ಗಲಾಟೆ ನಡೆದಿದ್ದು ಇಬ್ಬರ ಕೊಲೆಯಾಗಿದೆ. ಹಣದ ವಿಚಾರಕ್ಕೆ ಮಗ ತನ್ನ ಸ್ವಂತ ತಂದೆ, ತಾಯಿ, ಮಧ್ಯವರ್ತಿ ಸೇರಿ ಮೂವರ ಮೇಲೆ ಮಚ್ಚಿನಿಂದ ಹಲ್ಲೆ ನಡೆಸಿದ್ದಾರೆ. ತಂದೆ ಭಾಸ್ಕರ್ ಗೌಡ, ಮಧ್ಯವರ್ತಿ ಕಾರ್ತಿಕ್(45) ಮೃತಪಟ್ಟಿದ್ದು ತಾಯಿ ಸ್ಥಿತಿ ಗಂಭೀರವಾಗಿದೆ. ಮಂಗಳೂರು ಆಸ್ಪತ್ರೆಯಲ್ಲಿ ಚಿಕಿತ್ಸೆ ಕೊಡಿಸಲಾಗುತ್ತಿದೆ.

### ಸಾಲಬಾಧೆ ತಾಳಲಾರದೆ ಸೀಮೆಎಣ್ಣೆ ಸುರಿದು ಬೆಂಕಿ ಹಚ್ಚಿಕೊಂಡ ರೈತ

ಮೈಸೂರು ಜಿಲ್ಲೆ ಸಾಲಿಗ್ರಾಮ ತಾಲೂಕಿನ ತಂದ್ರೆಕೊಪ್ಪಲು ಗ್ರಾಮದಲ್ಲಿ ಸಾಲಬಾಧೆ ತಾಳಲಾರದೆ ಸೀಮೆಎಣ್ಣೆ ಸುರಿದುಕೊಂಡು ಬೆಂಕಿ ಹಚ್ಚಿಕೊಂಡು ರೈತ ಅಶೋಕ್(40) ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಸಾಲಿಗ್ರಾಮದ ಕರ್ನಾಟಕ ಬ್ಯಾಂಕ್ ಶಾಖೆಯಲ್ಲಿ 2.67 ಲಕ್ಷ ರೂ., 5 ಲಕ್ಷ ಕೈಸಾಲ ಮಾಡಿದ್ದ ಮೃತ ಅಶೋಕ್ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಸಾಲಿಗ್ರಾಮ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ

### ಇಂದು ತಾಲ್ಲೂಕು ಆಡಳಿತದ ವತಿಯಿಂದ 76ನೇ ಸ್ವಾತಂತ್ರ್ಯೋತ್ಸವ

» ಚಳ್ಳಕೆರೆ

ತಾಲ್ಲೂಕು ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಪ್ರತಿವರ್ಷದಂತೆ 76ನೇ ಸ್ವಾತಂತ್ರ್ಯೋತ್ಸವವನ್ನು ನಗರದ ಬಿಎಂ ಸರ್ಕಾರಿ ಪ್ರೌಢಶಾಲಾ ಮೈದಾನದಲ್ಲಿ ಸಂಭ್ರಮ, ಸಡಗರಗಳಿಂದ ಆಚರಿಸಲು ಸಿದ್ದತೆ ಮಾಡಿಕೊಳ್ಳುತ್ತಿದ್ದು, ಈಗಾಗಲೇ ಕಾರ್ಯಕ್ರಮ ಆಹ್ವಾನಿಸಲು ಆಹ್ವಾನ ಪತ್ರಿಕೆಯನ್ನು ವಿತರಣೆ ಮಾಡಲಾಗಿದೆ. ವಿಶೇಷವೆಂದರೆ ತಾಲ್ಲೂಕು ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಸಾರ್ವಜನಿಕರಿಗೆ ಆಹ್ವಾನ ಪತ್ರಿಕೆ ನೀಡುವಾಗ ಪ್ರಸ್ತುತ ವಾಸ್ತವ ಪರಿಸ್ಥಿತಿಯನ್ನು ಅರಿತು ಮುಖ್ಯ ಅತಿಥಿಗಳನ್ನು ಆಹ್ವಾನ ಪತ್ರಿಕೆಯಲ್ಲಿ ಮುದ್ರಿಸಬೇಕು. ಸರ್ಕಾರದ ನಿಯಮಗಳ ಅನುಸಾರ ಆಹ್ವಾನ ಪತ್ರಿಕೆಗಳನ್ನು ಮುದ್ರಿಸಿ ವಿತರಣೆ ಮಾಡಬೇಕು.

ಆದರೆ, ಪ್ರಸ್ತುತ ನಗರಸಭೆ ಆಡಳಿತದ ಆಡಳಿತಾಧಿಕಾರಿಗಳಾಗಿ ಜಿಲ್ಲಾಧಿಕಾರಿಗಳು ಆಡಳಿತ ನಡೆಸುತ್ತಿದ್ದು, ಕೇವಲ ಚುನಾಯಿತ ಸದಸ್ಯರನ್ನು ವಾಡಿಕೆಯಂತೆ ಆಹ್ವಾನ ಪತ್ರಿಕೆಯಲ್ಲಿ ಅವರ ಹೆಸರು ಮುದ್ರಿಸಿ ವಿತರಣೆ ಮಾಡಲಾಗಿದೆ. ರಾಜ್ಯ ಸರ್ಕಾರ ಬದಲಾವಣೆಯಾಗಿದ್ದು, ಪ್ರಸ್ತುತ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಆಡಳಿತದಲ್ಲಿದೆ. ಆದರೆ, ಬಿಜೆಪಿ ಸರ್ಕಾರದ ಆಡಳಿತದಲ್ಲಿ ನಾಮನಿರ್ದೇಶನ ಮಾಡಿದ ಐವರು ಸದಸ್ಯರು ಅಧಿಕಾರ ವಂಚಿತವಾಗಿ ಮೂರು ತಿಂಗಳು ಕಳೆದರೂ ಸಹ ಅವರ ಹೆಸರುಗಳನ್ನು ಆಹ್ವಾನ ಪತ್ರಿಕೆಯಲ್ಲಿ ಮುದ್ರಿಸುವ ಮೂಲಕ ತಾಲ್ಲೂಕು ಆಡಳಿತ ಸಾರ್ವಜನಿಕರ ಅಪಹಾಸ್ಯಕ್ಕೆ ಗುರಿಯಾಗಿದೆ. ಇದರಿಂದ ಸಾರ್ವಜನಿಕರಲ್ಲಿ ಗೊಂದಲ ಮೂಡಿದೆ. ತಾಲ್ಲೂಕು ಆಡಳಿತ ಐವರು ನಾಮನಿರ್ದೇಶನ ಸದಸ್ಯರ ಹೆಸರು ಪ್ರಕಟಿಸಿದ ಬಗ್ಗೆ ಸ್ಪಷ್ಟೀಕರಣ ನೀಡುವುದೇ ಕಾದುನೋಡಬೇಕು.

### ಭಾರತ ಸ್ವಾತಂತ್ರ್ಯೋತ್ಸವ: ಅಧಿಕಾರಿಗಳು, ನೌಕರರು ಕಡ್ಡಾಯ ಭಾಗವಹಿಸಲು ಸೂಚನೆ

» ಚಿತ್ರದುರ್ಗ

ಜಿಲ್ಲಾಡಳಿತದ ವತಿಯಿಂದ ಇದೇ ಆಗಸ್ಟ್ 15ರಂದು ಆಚರಿಸುವ ಭಾರತ ಸ್ವಾತಂತ್ರ್ಯೋತ್ಸವ ಸಮಾರಂಭದ ಎಲ್ಲಾ ಕಾರ್ಯಕ್ರಮಗಳಲ್ಲಿ ಸರ್ಕಾರಿ ಅಧಿಕಾರಿಗಳು ಹಾಗೂ ನೌಕರರು ಕಡ್ಡಾಯವಾಗಿ ಭಾಗವಹಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ತಿಳಿಸಿದ್ದಾರೆ. ಭಾರತ ಸ್ವಾತಂತ್ರ್ಯೋತ್ಸವ ಸಮಾರಂಭದ ಅಂಗವಾಗಿ ಬೆಳಿಗ್ಗೆ 7.30ಕ್ಕೆ ಸರಿಯಾಗಿ ಜಿಲ್ಲಾ ಕಚೇರಿ ಮುಂಭಾಗದಲ್ಲಿ ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ರಾಷ್ಟ್ರಧ್ವಜಾರೋಹಣ ಮಾಡುವರು. ಜಿಲ್ಲಾ ಕಚೇರಿ ಸಂಕೀರ್ಣದಲ್ಲಿರುವ ಎಲ್ಲಾ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರು ಬೆಳಿಗ್ಗೆ 7.30 ಗಂಟೆಗಿಂತ ಮುಂಚಿತವಾಗಿ ಜಿಲ್ಲಾ ಕಚೇರಿಯ ಮುಂಭಾಗದಲ್ಲಿರುವ ಧ್ವಜಸ್ತಂಭದ ಬಳಿ ಸಮಾವೇಶಗೊಳ್ಳಬೇಕು. ಅಂದು ಬೆಳಿಗ್ಗೆ 9 ಗಂಟೆಗೆ ನಗರದ ಸರ್ಕಾರಿ ವಿಜ್ಞಾನ ಕಾಲೇಜು ಮೈದಾನದಲ್ಲಿ ಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಅವರು ರಾಷ್ಟ್ರ ಧ್ವಜಾರೋಹಣ ನೆರವೇರಿಸುವರು. ಸಂಜೆ 5.30ಕ್ಕೆ ನಗರದ ತರಾಸು ರಂಗಮಂದಿರದಲ್ಲಿ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿವೆ. ಸ್ವಾತಂತ್ರ್ಯೋತ್ಸವದ ಎಲ್ಲಾ ಕಾರ್ಯಕ್ರಮಗಳಲ್ಲಿ ಎಲ್ಲಾ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರು ಕಡ್ಡಾಯವಾಗಿ ಭಾಗವಹಿಸಬೇಕು.

# ಅಂಚೆ ಇಲಾಖೆ ಮೂಲಕ ರಾಷ್ಟ್ರೀಯ ಧ್ವಜ ವಿತರಣಾ ಕಾರ್ಯಕ್ರಮ ಸಂತಸ ತಂದಿದೆ

» ಚಳ್ಳಕೆರೆ

ರಾಷ್ಟ್ರದ ಪ್ರತಿಯೊಬ್ಬ ಪ್ರಜೆಯೂ 76ನೇ ಸ್ವಾತಂತ್ರ್ಯೋತ್ಸವವನ್ನು ಸಂಭ್ರಮ, ಸಡಗರಗಳಿಂದ ಆಚರಿಸುವುದಲ್ಲದೆ, ಸ್ವಾತಂತ್ರ್ಯಕ್ಕೋಸ್ಕರ ತ್ಯಾಗ, ಬಲಿದಾನಗೈದ ಮಹಾನ್ ವ್ಯಕ್ತಿಗಳನ್ನು ಸ್ಮರಿಸಿಕೊಳ್ಳುವ ಕಾರ್ಯಕ್ರಮವಾಗಿದ್ದು, ಪ್ರತಿಯೊಬ್ಬರಲ್ಲೂ ದೇಶ ಭಕ್ತಿ ಮೂಡಿಸಲು ಕೇಂದ್ರದ ಸರ್ಕಾರದ ಸೂಚನೆಯಂತೆ ಅಂಚೆ ಕಚೇರಿ ಮೂಲಕ ರಾಷ್ಟ್ರ ಧ್ವಜವನ್ನು ಕಡಿಮೆ ದರದಲ್ಲಿ ವಿತರಿಸಿ ಅವರೆಲ್ಲರೂ ಆಗಸ್ಟ್ 15ರಂದು ಧ್ವಜರೋಹಣ ತಮ್ಮ ಮನೆಯಲ್ಲಿ ಮಾಡುವಂತೆ ವಿನಂತಿಸಲಾಗುತ್ತಿದೆ. ಪ್ರಾಧನ ಅಂಚೆಯ ವ್ಯವಸ್ಥಾಪಕಿ ಗೀತಾ ತಿಳಿಸಿದರು.



ಅವರು, ನಗರದ ಕೃಷ್ಣಭವನ ಹೋಟೆಲ್ ಮುಂಭಾಗದಲ್ಲಿ ಸಾರ್ವಜನಿಕರಿ ರಾಷ್ಟ್ರೀಯ ಧ್ವಜಗಳನ್ನು ವಿತರಿಸಿ ಮಾತನಾಡಿದರು. ಕಳೆದ 2022ರ ಅಮೃತ ಮಹೋತ್ಸವ ಸ್ವಾತಂತ್ರ್ಯೋತ್ಸವ ಆಚರಣೆಗೂ ಸಹ ಅಂಚೆ ಕಚೇರಿ ಮೂಲಕ ಕಡಿಮೆ ದರದಲ್ಲಿ ಧ್ವಜಗಳನ್ನು ವಿತರಿಸಲಾಗಿತ್ತು. ಈ ಬಾರಿಯೂ ಸಹ ಇದು ಮುಂದುವರೆದಿದೆ. ಸಾರ್ವಜನಿಕರೂ ಸಹ ಈ ಕಾರ್ಯಕ್ರಮಕ್ಕೆ ನಿರೀಕ್ಷೆಗೂ ಮೀರಿ ಹೆಚ್ಚು ಬೆಂಬಲ ವ್ಯಕ್ತಪಡಿಸಿದ್ದಾರೆ. ನಗರ ಪ್ರದೇಶವಲ್ಲದೆ, ಗ್ರಾಮದಿಂದ ಆಗಮಿಸಿದ್ದ ಜನರೂ ಸಹ ರಾಷ್ಟ್ರ ಧ್ವಜವನ್ನು ಪ್ರತಿ, ವಿಶ್ವಾಸದಿಂಧ ಹಣ ನೀಡಿ ಪಡೆದು ಹೆಮ್ಮೆಯಿಂದ ಧ್ವಜಾರೋಹಣ ಮಾಡುವುದಾಗಿ ಆತ್ಮವಿಶ್ವಾಸದಿಂದ ತಿಳಿಸಿದ್ದಾರೆ. ಇದೊಂದು ಉತ್ತಮ ಬೆಳವಣಿಗೆ ಎಂದು ಭಾವಿಸಲಾಗಿದೆ. ದೇಶದ ಸ್ವಾತಂತ್ರ್ಯೋತ್ಸವ ಆಚರಣೆಯ ಬಗ್ಗೆ ಎಲ್ಲರಲ್ಲೂ ಹೆಚ್ಚು ಆತ್ಮವಿಶ್ವಾಸ ಮೂಡಿರುವುದು ಸಂತಸ ಸಂಗತಿ ಎಂದರು.

ಹೋಟೆಲ್ ವ್ಯವಸ್ಥಾಪಕರಾದ ಕೆ.ಕಿಶೋರ್‌ಕುಮಾರ್‌ಶೆಟ್ಟಿ ಮಾತನಾಡಿ, ಅಂಚೆ ಇಲಾಖೆ ಮೂಲಕ ರಾಷ್ಟ್ರೀಯ ಧ್ವಜ ವಿತರಣೆ ಮಾಡುತ್ತಿರುವುದು ಹೆಮ್ಮೆಯ ಸಂಗತಿ. ಸಾರ್ವಜನಿಕರಲ್ಲೂ ಸಹ ಈ ಬಗ್ಗೆ ಕುತೂಹಲದಿಂದ ಧ್ವಜವನ್ನು ಕೇಳಿ ಪಡೆಯುತ್ತಿರುವುದು ದೇಶದ ಬಗ್ಗೆ ಜನರಲ್ಲಿ ಇರುವ ಗೌರವಭಾವನೆ ವ್ಯಕ್ತವಾಗುತ್ತಿದೆ ಎಂದರು.

ಆಟೋಮೊಬೈಲ್ಸ್ ಮಾಲೀಕ ಎಂ.ಸಂಜೀವಪ್ಪ, ಡಾ.ತಿಪ್ಪೇಸ್ವಾಮಿ, ದಿನೇಶ್‌ಶೆಟ್ಟಿ, ಚಂದ್ರಶೇಖರ್‌ಐತಾಳ್, ಎ.ಎಸ್.ನಾಗರಾಜು, ಶ್ರೀನಿವಾಸ್‌ರಾಜ್, ಜಿ.ಯಶ್ವಂತಕುಮಾರ್, ಎಂ.ಎಸ್.ಮಾರುತೇಶ್, ಕರೀಕೆರೆ ನಾಗರಾಜು, ಎನ್.ಪ್ರೇಮಕುಮಾರ್ ಮುಂತಾದವರು ಉಪಸ್ಥಿತರಿದ್ದರು.



ಚಿತ್ರದುರ್ಗ: ಚಿತ್ರದುರ್ಗ ಜಿಲ್ಲಾ ಕೇಂದ್ರದಲ್ಲಿ ಭಾರತದ ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ಜಿಲ್ಲಾಡಳಿತದ ಜಿಲ್ಲಾಧಿಕಾರಿ ಕಚೇರಿಗೆ ತ್ರೀವರ್ಣ ಧ್ವಜ ಬಣ್ಣದ ದೀಪಾಲಂಕಾರದಲ್ಲಿ ಸಿಂಗರಿಸಲ್ಪಟ್ಟಿದ್ದು ಜನರ ಕಣ್ಮನ ಸೆಳೆಯುತ್ತಿದೆ.

# ಹರ್ ಘರ್ ತಿರಂಗ: ಬಾವುಟ ವಿತರಣೆ



» ಹೊಸದುರ್ಗ

ಆಜಾದಿ ಕಾ ಅಮೃತ ಮಹೋತ್ಸವ ಕಾರ್ಯಕ್ರಮದಡಿ ಹರ್ ಘರ್ ತಿರಂಗ ಅಭಿಯಾನವನ್ನು ಅನುಷ್ಟಾನಕ್ಕೆ ತರುವ ದೃಷ್ಟಿಯಿಂದ 76ನೇ ಸ್ವಾತಂತ್ರ □□ ದಿನೋತ್ಸವದ ಅಂಗವಾಗಿ ಪಟ್ಟಣದ 23 ವಾರ್ಡಗಳಲ್ಲಿ ಎಲ್ಲಾ ಮನೆಗಳ ಮೇಲೆ ರಾಷ್ಟ್ರಧ್ವಜವನ್ನು ಹಾರಿಸುವ ಮೂಲಕ ರಾಷ್ಟ್ರ ಪ್ರೇಮ ಮೆರೆಯಲು ಸುಮಾರು 1000 ಬಟ್ಟೆ ಬಾವುಟಗಳನ್ನು ಮನೆಮನೆಗೆ ವಿತರಣೆ ಮಾಡಲಾಯಿತು. ಈ ಸಂಧರ್ಭದಲ್ಲಿ ಮತನಾಡಿದ ಪುರಸಭಾ ಮುಖ್ಯಾಧಿಕಾರಿ ತಿಮ್ಮರಾಜು ಜಿ.ವಿ

ಸರ್ಕಾರದ ನಿಗಧಿಪಡಿಸಿದ ರೂ 25 ರಂತೆ ಹಣ ಸಂಗ್ರಹಿಸಿ ಜಿಲ್ಲಾಧಿಕಾರಿ ಖಾತೆಗೆ ಜಮಾ ಮಾಡಲಾಗುತ್ತಿದ್ದು ಎಲ್ಲಾ ಸಾರ್ವಜನಿಕರು ಕಾರ್ಯಕ್ರಮದಲ್ಲಿ ಬಾಗವಹಿಸಿ ಹಬ್ಬದ ರೀತಿಯಲ್ಲಿ ಸಂಭ್ರಮ ಆಚರಣೆ ಮಾಡಬೇಕು ಎಂದು ಕರೆ ನೀಡಿದರು. ಕಂದಾಯ ನಿರೀಕ್ಷಕ ಜಿ ಎನ್ ಕುಮಾರ್ ಮಾತನಾಡಿ ಸರ್ಕಾರ ಪ್ಲಾಸ್ಟಿಕ್ ಧ್ವಜಗಳನ್ನು ಮಾರಾಟ ಮಾಡುವುದಾಗಲಿ ಹಾಗೂ ಬಳಕೆ ಮಾಡುವುದನ್ನು ಸಂಪೂರ್ಣವಾಗಿ ನಿಷೇದಿಸಿದ್ದು ಪಟ್ಟಣದಲ್ಲಿ ಯಾವುದೇ ವರ್ತಕರು ಪ್ಲಾಸ್ಟಿಕ್ ಮಾರಾಟ ಮಾಡುವುದು ಕಂಡುಬಂದಲ್ಲಿ ಕಾನೂನು ಕ್ರಮ ಜರುಗಿಸುವ ಎಚ್ಚರಿಕೆ ನೀಡಲಾಗುತ್ತಿದ್ದು ರಾಷ್ಟ್ರೀಯ ಹಬ್ಬವಾಗಿರುವ ಹಿನ್ನೆಲೆಯಲ್ಲಿ ವರ್ತಕರು ಸ್ವಯಂಪ್ರೇರಿತರಿಂದ ಬಟ್ಟೆ ಬಾವುಟವನ್ನು ಮಾರಾಟ ಮಾಡಲು ಪುರಸಭೆಯಿಂದ ಮನವಿ ಮಾಡಲಾಗಿದ್ದು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ ಎಂದರು. ಈ ಸಂದರ್ಭದಲ್ಲಿ ಅರೋಗ್ಯ ನಿರೀಕ್ಷರಾದ ಕಲ್ಪನಾ, ಪ್ರದೀಪ್ ಸಿಬ್ಬಂದಿಗಳಾದ ವಿಕಾಸ್ ತಿಪ್ಪೇಶ್, ನೀರು ಸರಬರಾಜು ಸಹಾಯಕ ಶ್ರೀನಿವಾಸ್, ಲೋಕೇಶ್ ಮೂರ್ತಿ, ವೈ ರಾಜು ಕೃಷಪ್ಪ, ಬಸವರಾಜು ಹಾಜರಿದ್ದರು.

## ಖಾಸಗಿ ಜಮೀನಿನಲ್ಲಿ ವ್ಯಕ್ತಿ ಸಾವು

» ಚಳ್ಳಕೆರೆ

ತಾಲ್ಲೂಕಿನ ತಳಕು ಪೊಲೀಸ್ ಠಾಣಾ ವ್ಯಾಪ್ತಿಯ ದೊಡ್ಡ ಉಳ್ಳಾರ್ತಿ ಗ್ರಾಮದ ಯಂಗಣ್ಣರೆಡ್ಡಿ ಎಂಬುವವರ ಜಮೀನನಲ್ಲಿ ಅದೇ ಗ್ರಾಮದ ಭೀಮಣ್ಣ(65) ಎಂಬ ವ್ಯಕ್ತಿ ಮೃತಪಟ್ಟು ಮೂರ್‍ನಾಲ್ಕು ದಿನಗಳ ನಂತರ ಮನೆಯವರಿಗೆ ಮಾಹಿತಿ ದೊರಕಿದೆ. ಮೃತ ಪತ್ನಿ ಗೌರಮ್ಮ ತಳಕು ಪೊಲೀಸ್ ಠಾಣೆಗೆ ದೂರು ನೀಡಿ, ನನ್ನ ಪತಿ ನನ್ನಿಂದ ದೂರವಾಗಿ ಪ್ರತ್ಯೇಕವಾಗಿ ಇದೇ ಗ್ರಾಮದಲ್ಲಿ ವಾಸಮಾಡುತ್ತಿದ್ದ. ಭಾನುವಾರ ಬೆಳಗ್ಗೆ ನಮ್ಮ ಗ್ರಾಮದ ಯಂಗಣ್ಣರೆಡ್ಡಿ ಗ್ರಾಮದಲ್ಲಿ ಕೊಳೆತ ಪುರುಷನ ಶವ ಇರುವ ಬಗ್ಗೆ ತಿಳಿದಿದ್ದು ಸ್ಥಳಕ್ಕೆ ಭೇಟಿ ನೀಡಿ ನೋಡಿದಾಗ ಅದು ನನ್ನ ಗಂಡ ಭೀಮಣ್ಣನ ಶವವಾಗಿತ್ತು. ಇವರ ಸಾವಿನ ಬಗ್ಗೆ ಅನುಮಾನವಿದ್ದು ತನಿಖೆ ನಡೆಸುವಂತೆ ಪಿಎಸ್‌ಐ ಲೋಕೇಶ್ ಪ್ರಕರಣ ದಾಖಲಿಸಿ ತನಿಖೆ ನಡೆಸುತ್ತಿದ್ದಾರೆ.

## ಪ್ರಮುಖ ಸುದ್ದಿ

# ಸ್ವಾತಂತ್ರ್ಯೋತ್ಸವದ ಅಮೃತ ಮಹೋತ್ಸವದಲ್ಲೂ ಸಹ ಬ್ರಿಟಿಷರ ದಾಸ್ಯದ ಕರಿನೆರಳು ನಮ್ಮನ್ನು ಆವರಿಸಿದೆ: ಸಕಲೇಶಪುರ ರಘು

» ಚಳ್ಳಕೆರೆ

ದೇಶದಾದ್ಯಂತ ಇಂದು ಸ್ವಾತಂತ್ರ್ಯೋತ್ಸವದ ಅಮೃತ ಮಹೋತ್ಸವವನ್ನು ಸಂಭ್ರಮ, ಸಡಗರಗಳಿಂದ ಆಚರಣೆ ಮಾಡುತ್ತಿದ್ದು, ದೇಶಕ್ಕಾಗಿ ಬಲಿದಾನಗೈದ ಸೈನಿಕರೂ ಸೇರಿದಂತೆ ಮಹಾನ್ ವ್ಯಕ್ತಿಗಳ ಸ್ಮರಿಸುವ ದಿನವಾಗಿದೆ. ತಮ್ಮ ಪ್ರಾಣವನ್ನು ತ್ಯಾಗಮಾಡಿದ ಸಾವಿರಾರು ಸೈನಿಕರ ಈ ಭೂಮಿ, ಧರ್ಮ, ಸಮಾಜವನ್ನು ಸಂರಕ್ಷಿಸುವ ಮಹಾನ ಸಂಕಲ್ಪವನ್ನು ನಾವೆಲ್ಲರೂ ಮಾಡಬೇಕೆಂದು ವಿಶ್ವಹಿಂದೂ ಪರಿಷತ್ ಪ್ರಾಂತ ಕಾರ್ಯಕಾರಿ ಸಮಿತಿ ಸದಸ್ಯ ಸಕಲೇಶಪುರ ರಘು ತಿಳಿಸಿದರು.





ಅವರು, ನಗರದ ಅಶೋಕ ಸ್ಪೋರ್ಟ್ ಕ್ಲಬ್ ಆವರಣದಲ್ಲಿ ವಿಶ್ವಹಿಂದೂಪರಿಷತ್, ಭಜರಂಗದಳ ಆಯೋಜಿಸಿದ್ದ ಅಖಂಡ ಭಾರತ ಸಂಕಲ್ಪ ದಿನ ಕಾರ್ಯಕ್ರಮದ ದಿಕ್ಸೂಚಿ ಭಾಷಣ ಮಾಡಿದರು. 1947 ಆಗಸ್ಟ್ 14ರ ನಡುರಾತ್ರಿ ಅವವಾಸೆಯ ಕಾರ್ಯಕತ್ತಲಲ್ಲಿ ಬ್ರಿಟಿಷರು ನಮಗೆ ಸ್ವಾತಂತ್ರ್ಯವನ್ನು ನೀಡಿಹೋದರು. ಬ್ರಿಟಿಷರಿಂದ ಪಡೆದ ಸ್ವಾತಂತ್ರ್ಯವನ್ನು ನಾವು ಇಂದು ಆಚರಣೆ ಮಾಡುತ್ತಿದ್ದರೂ ಸಹ ಬ್ರಿಟಿಷರ ದಾಸ್ಯದಿಂದ ಹೊರಬಂದಿಲ್ಲ. ನಮ್ಮ ಸ್ವಾತಂತ್ರ್ಯಕ್ಕಾಗಿ ಹೋರಾಟ ನಡೆಸಿದ ಅನೇಕ ಮಹಾನೀಯರ ಸೇವೆ ನಮಗೆ ಮಾರ್ಗದರ್ಶನವಾಗಿದೆ. ನಮ್ಮ ಪೂರ್ವಜರ ಆಸೆಯಂತೆ ಅಖಂಡ ಭಾರತ ನಿರ್ಮಾಣದ ಕನಸು ಇನ್ನೂ ನನಸಾಗಿಲ್ಲ. ಈ ಕನಸು ನನಸಾಗಲು ನಾವು ಇನ್ನೂ ಸಾಕಷ್ಟು ಪ್ರಯತ್ನ ಮುಂದುವರೆಸಬೇಕಿದೆ. ನಾವೆಲ್ಲಾ ಭಾರತೀಯ ಒಂದೇ ಎಂಬ ಭಾವನೆಯಿಂದ ಸಂಘಟಿತರಾಗಿ ಎಚ್ಚೆತ್ತುಕೊಂಡಾಗ ಮಾತ್ರ ಅಖಂಡ ಭಾರತದ ಕನಸು ನನಸಾಗುವುದು ಎಂದರು. ಪ್ರಾಸ್ತಾವಿಕವಾಗಿ ಮಾತನಾಡಿದ ವಿಶ್ವಹಿಂದೂ ಪರಿಷತ್ ತಾಲ್ಲೂಕು ಅಧ್ಯಕ್ಷ ಡಾ.ಡಿ.ಎನ್.ಮಂಜುನಾಥ, ಅಖಂಡ ಭಾರತ ಸಂಕಲ್ಪ ದಿನ ಕಾರ್ಯಕ್ರಮವನ್ನು ಆಯೋಜನೆ ಮಾಡಲು ಉದ್ದೇಶಿಸಿದಾಗ ನಮಗೆ ಎಲ್ಲಾ ರೀತಿಯ ಸಹಕಾರವನ್ನು ಹಲವಾರು ಸಂಘ, ಸಂಸ್ಥೆಗಳ ಮುಖಂಡರು ನೀಡಿದ್ದಾರೆ. ನಗರದ ಚಳ್ಳಕೆರೆಯಮ್ಮ ದೇವಸ್ಥಾನದಿಂದ ಇಲ್ಲಿವರೆಗೂ ಪಂಜಿನ ಮೆರವಣಿಗೆ ಮೂಲಕ ಜನರಲ್ಲಿ ಜಾಗೃತಿ ಮೂಡಿಸಲಾಯಿತು ಎಂದರು. \

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮಾಜಿ ಸೈನಿಕ ಸೋಮಗುದ್ದುಕರಿಯಣ್ಣ ವಹಿಸಿದ್ದರು, ವಿಶ್ವಹಿಂದೂಪರಿಷತ್ ನಗರ ಘಟಕದ ಅಧ್ಯಕ್ಷ ಕೆ.ಎಂ. ಯತೀಶ್, ಭಜರಂಗದಳ ತಾಲ್ಲೂಕು ಸಂಯೋಜಕ ಉಮೇಶ್ ಮುಂತಾದವರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T